ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 179

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795

ಬುಧವಾರ: 24-06-2026

# ಗ್ರಾಮೀಣ ಅಭಿವೃದ್ಧಿಗೆ ಬಸವನಗೌಡ ದದ್ದಲ್ ಚಾಲನೆ

## ಮೂರು ಗ್ರಾಮಗಳಲ್ಲಿ ಸಮುದಾಯ ಭವನ, ಶಾಲಾ ಕೊಠಡಿಗಳ ಉದ್ಘಾಟನೆ ಶಿಕ್ಷಣ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಆದ್ಯತೆ



ಬೈಲ್ ಮರ್ಚಡ್ ಗ್ರಾಮದಲ್ಲಿ ಕೆ.ಕೆ.ಆರ್.ಡಿ.ಬಿ. ಮೈಕ್ರೋಯೋಜನೆಯಡಿಯಲ್ಲಿ ನಿರ್ಮಿಸಲಾದ ಸಮುದಾಯ ಭವನವನ್ನು ಶಾಸಕ ಬಸವನಗೌಡ ದದ್ದಲ್ ಉದ್ಘಾಟಿಸಿದರು.



ಮಾನ್ವಿ: ತಾಲೂಕಿನ ರಾಜಲಬಂಡ ಗ್ರಾಮದ ಉನ್ನತಿಕರಿಸಿದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನೂತನ ಶಾಲಾ ಕೋಠಡಿಗಳನ್ನು ಬಸವನಗೌಡ ದದ್ದಲ್ ಉದ್ಘಾಟಿಸಿದರು.



ಕಂಬಳನೆತ್ತಿ ಗ್ರಾಮದಲ್ಲಿ ಕೆ.ಕೆ.ಆರ್.ಡಿ.ಬಿ. ಮೈಕ್ರೋಯೋಜನೆಯಡಿಯಲ್ಲಿ ನಿರ್ಮಿಸಲಾದ ಸಮುದಾಯ ಭವನವನ್ನು ಬಸವನಗೌಡ ದದ್ದಲ್ ಉದ್ಘಾಟಿಸಿದರು.

ಧೈರ್ಯದ ದಾರಿ

**ಮಾನ್ವಿ, ಜೂ. 23:** ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕ ಹಾಗೂ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಬಸವನಗೌಡ ದದ್ದಲ್ ಅವರು ತಾಲೂಕಿನ ಬೈಲ್ ಮರ್ಚಡ್, ರಾಜಲಬಂಡ ಹಾಗೂ ಕಂಬಳನೆತ್ತಿ ಗ್ರಾಮಗಳಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಉದ್ಘಾಟಿಸಿ ಗ್ರಾಮೀಣ ಅಭಿವೃದ್ಧಿಗೆ ಮತ್ತಷ್ಟು ವೇಗ ನೀಡಿದರು.

**ಬೈಲ್ ಮರ್ಚಡ್‌ನಲ್ಲಿ ಸಮುದಾಯ ಭವನ ಉದ್ಘಾಟನೆ:** ಬೈಲ್ ಮರ್ಚಡ್ ಗ್ರಾಮದಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ 2024-25ನೇ ಸಾಲಿನ ಕೆ.ಕೆ.ಆರ್.ಡಿ.ಬಿ. ಮೈಕ್ರೋ ಯೋಜನೆಯಡಿ ಅಂದಾಜು 23 ಲಕ್ಷ ವೆಚ್ಚದಲ್ಲಿ ನಿರ್ಮಿಸಲಾದ ನೂತನ ಸಮುದಾಯ ಭವನವನ್ನು ಶಾಸಕ ಬಸವನಗೌಡ ದದ್ದಲ್ ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, ಸಮುದಾಯ ಭವನವನ್ನು ಗ್ರಾಮದ ಎಲ್ಲ ಸಮುದಾಯದ ಜನರು ಸದುಪಯೋಗಪಡಿಸಿಕೊಂಡು ಉತ್ತಮ ನಿರ್ವಹಣೆ ಮಾಡುವ ಮೂಲಕ ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲ ಕಲ್ಪಿಸಬೇಕು ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಎರಡು ನೂತನ ಕೊಠಡಿಗಳನ್ನು ನಿರ್ಮಿಸಿರುವುದಾಗಿ ಹೇಳಿದರು.

**ರಾಜಲಬಂಡದಲ್ಲಿ 40 ಲಕ್ಷ ವೆಚ್ಚದ ಶಾಲಾ ಕೊಠಡಿಗಳ ಲೋಕಾರ್ಪಣೆ:** ರಾಜಲಬಂಡ ಗ್ರಾಮದ ಉನ್ನತೀಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕೆ.ಕೆ.ಆರ್.ಡಿ.ಬಿ. ಮೈಕ್ರೋ ಯೋಜನೆಯಡಿ ಅಂದಾಜು 40 ಲಕ್ಷ ವೆಚ್ಚದಲ್ಲಿ ನಿರ್ಮಿಸಲಾದ ಮೂರು ನೂತನ ಶಾಲಾ ಕೊಠಡಿಗಳನ್ನು ಶಾಸಕ ದದ್ದಲ್ ಉದ್ಘಾಟಿಸಿದರು. ಗ್ರಾಮೀಣ ಭಾಗದ ಮಕ್ಕಳ ಶಿಕ್ಷಣಕ್ಕೆ ರಾಜ್ಯ ಸರ್ಕಾರ ಹೆಚ್ಚಿನ ಮಹತ್ವ ನೀಡುತ್ತಿದೆ ಎಂದು ತಿಳಿಸಿದ ಅವರು, ಶಾಲೆಗೆ ಅಗತ್ಯವಿರುವ ಎಲ್ಲ ಮೂಲಸೌಕರ್ಯಗಳನ್ನು ಕಲ್ಪಿಸಲಾಗುವುದು ಹಾಗೂ ಶಿಕ್ಷಕರ ಕೊರತೆಯನ್ನು ನಿವಾರಿಸಲು ಐದು ಅತಿಥಿ ಶಿಕ್ಷಕರನ್ನು ನೇಮಿಸಲಾಗಿದೆ ಎಂದು ಹೇಳಿದರು. ಶಾಲಾ ಮಕ್ಕಳಿಗೆ ಸರ್ಕಾರದ ಎಲ್ಲಾ ಸೌಲಭ್ಯಗಳು ಸಮರ್ಪಕವಾಗಿ ತಲುಪಬೇಕು ಎಂದು ಶಿಕ್ಷಕರಿಗೆ ಸೂಚಿಸಿದ ಅವರು, ಮಕ್ಕಳ ಸುರಕ್ಷತೆಗಾಗಿ ಶಾಲಾ ಆವರಣದಲ್ಲಿ ಸಿಸಿ ಕ್ಯಾಮೆರಾಗಳನ್ನು ಅಳವಡಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು. ಇದೇ ವೇಳೆ ವಿದ್ಯಾರ್ಥಿಗಳು ಉಚಿತ ಬೈಸಿಕಲ್ ವಿತರಣೆ ಮಾಡುವಂತೆ ಶಾಸಕರಿಗೆ ಮನವಿ ಸಲ್ಲಿಸಿದರು.

**ಕಂಬಳನೆತ್ತಿಯಲ್ಲಿ ನೂತನ ಸಮುದಾಯ ಭವನಕ್ಕೆ ಚಾಲನೆ:** ಕಂಬಳನೆತ್ತಿ ಗ್ರಾಮದಲ್ಲಿ ಕೆ.ಕೆ.ಆರ್.ಡಿ.ಬಿ. ಮೈಕ್ರೋ ಯೋಜನೆಯಡಿ ಅಂದಾಜು 23.24 ಲಕ್ಷ ವೆಚ್ಚದಲ್ಲಿ ನಿರ್ಮಿಸಲಾದ ಸಮುದಾಯ ಭವನವನ್ನು ಶಾಸಕ ಬಸವನಗೌಡ ದದ್ದಲ್ ಉದ್ಘಾಟಿಸಿದರು. ಗ್ರಾಮದಲ್ಲಿ ನಡೆಯುವ ಮದುವೆ ಸೇರಿದಂತೆ ವಿವಿಧ ಸಾಮಾಜಿಕ ಕಾರ್ಯಕ್ರಮಗಳಿಗೆ ಸಮುದಾಯ ಭವನವನ್ನು ಬಳಸಿಕೊಳ್ಳಬೇಕು, ಅದನ್ನು ಉಗ್ರಾಣವಾಗಿ ಬಳಸಬಾರದು ಎಂದು ಗ್ರಾಮಸ್ಥರಿಗೆ ಸಲಹೆ ನೀಡಿದರು. ಗ್ರಾಮಸ್ಥರ ಬೇಡಿಕೆಯಂತೆ ಶಿವಪ್ಪ ತಾತನವರ ಮಠದ ಆವರಣಕ್ಕೆ ತಡೆಗೋಡೆ ನಿರ್ಮಾಣಕ್ಕಾಗಿ 5 ಲಕ್ಷ ಅನುದಾನ ಮಂಜೂರು ಮಾಡಲಾಗಿದೆ ಎಂದು ತಿಳಿಸಿದ ಅವರು, ಶಾಲೆಗಳಿಗೆ ಮೂಲಸೌಕರ್ಯ, ಶುದ್ಧ ಕುಡಿಯುವ ನೀರು, ವಿದ್ಯುತ್ ಸಂಪರ್ಕ ಹಾಗೂ ಧಾರ್ಮಿಕ ಕೇಂದ್ರಗಳ ಅಭಿವೃದ್ಧಿಗೆ ಅಗತ್ಯ ನೆರವು ನೀಡಲಾಗುವುದು ಎಂದು ಭರವಸೆ ನೀಡಿದರು.

ಕಾರ್ಯಕ್ರಮಗಳಲ್ಲಿ ತಾಲೂಕು ಪಂಚಾಯಿತಿ ಇಒ ಖಾಲೀದ್ ಅಹಮ್ಮದ್, ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ ಡಿ., ಗ್ರಾಮ ಪಂಚಾಯಿತಿ ಪಿಡಿಒಗಳಾದ ಚೌಡಯ್ಯ ಹಾಗೂ ಅಕ್ತರ್ ಪಾಷಾ, ಜೆಸ್ಕಾಂ ಎಇಇ ವೈಜನಾಥಸ್ವಾಮಿ, ಗ್ರಾಮ ಮುಖಂಡರಾದ ವಿಶ್ವನಾಥರೆಡ್ಡಿ, ಹುಲುಗಯ್ಯ ಸಾಹುಕಾರ್, ನಾಗೇಂದ್ರಪ್ಪ, ತಿಕ್ಕಯ್ಯಸ್ವಾಮಿ, ಮಲ್ಲಿಕಾರ್ಜುನ ಗೌಡ, ಶಿವಪ್ಪನಾಯಕ, ಮೌನೇಶನಾಯಕ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಅಡ್ಡ ಮತದಾನ: ಬಿಜೆಪಿ ಕಠಿಣ ಕ್ರಮಕ್ಕೆ ಸಜ್ಜು

**ಬೆಂಗಳೂರು, ಜೂ. 23–** ವಿಧಾನ ಪರಿಷತ್ ಚುನಾವಣೆಯಲ್ಲಿ ಅಡ್ಡ ಮತದಾನ ಮಾಡಿದ ಶಾಸಕರ ಬಗ್ಗೆ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್. ಅಶೋಕ್ ವರಿಷ್ಠರಿಗೆ ವಿವರ ನೀಡಿ, ಅಡ್ಡ ಮತದಾನ ಮಾಡಿದವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವಂತೆ ಕೋರಿದ್ದಾರೆ.ವಿಧಾನ ಪರಿಷತ್ ಚುನಾವಣೆಯಲ್ಲಿ ಅಡ್ಡ ಮತದಾನ ಮಾಡಿದ ಶಾಸಕರುಗಳ ಪಟ್ಟಿಯ ಜತೆ ಇಂದು ದೆಹಲಿಗೆ ತೆರಳಿರುವ ಬಿ.ವೈ. ವಿಜಯೇಂದ್ರ ಮತ್ತು ಆರ್. ಅಶೋಕ್ ಅವರು ಪಕ್ಷದ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಅವರನ್ನು ದೆಹಲಿಯಲ್ಲಿರುವ ಬಿಜೆಪಿ ಪ್ರಧಾನ ಕಚೇರಿಯಲ್ಲಿ ಭೇಟಿ ಮಾಡಿ ಅಡ್ಡ ಮತದಾನ ಮಾಡಿದ ಶಾಸಕರ ಬಗ್ಗೆ ಮಾಹಿತಿ ನೀಡಿದರು.

ವಿಧಾನ ಪರಿಷತ್ ಚುನಾವಣೆಯಲ್ಲಿ ಪಕ್ಷದ ಆರೇಳು ಶಾಸಕರು ಅಡ್ಡ ಮತದಾನ ಮಾಡಿದ್ದಾರೆ. ಈ ಬಗ್ಗೆ ನಮಗೆ ಮಾಹಿತಿ ಇದೆ. ಅಡ್ಡ ಮತದಾನ ಮಾಡಿರುವವರ ಬಗ್ಗೆ ತಮಗೂ ದೂರವಾಣಿ ಮಾಡಿ ವಿವರ ನೀಡಿದ್ದೇವೆ ಎಂದು ವಿಜಯೇಂದ್ರ ಮತ್ತು ಆರ್. ಅಶೋಕ್ ಅವರು ಎಲ್ಲವನ್ನೂ ನಿತಿನ್ ನಬಿನ್ ರವರ ಗಮನಕ್ಕೆ ತಂದರು.

ಪಕ್ಷಕ್ಕೆ ದ್ರೋಹ ಮಾಡಿದವರನ್ನು ಕ್ಷಮಿಸುವ ಪ್ರಶ್ನೆಯೇ ಇಲ್ಲ. ಅಡ್ಡ ಮತದಾನ ಮಾಡಿದವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಬೇಕು ಎಂದು ಈ ಇಬ್ಬರು ನಾಯಕರು ವರಿಷ್ಠರಲ್ಲಿ ಭಿನ್ನವಿಸಿಕೊಂಡರು.

ಅಡ್ಡ ಮತದಾನ ಮಾಡಿದ ಶಾಸಕರ ಬಗ್ಗೆ ಮೌಖಿಕ ಮಾಹಿತಿಯನ್ನು ಪಕ್ಷದ ರಾಷ್ಟ್ರೀಯ ಅಧ್ಯಕ್ಷರಿಗೆ ಸಾಕ್ಷ್ಯಗಳ ಸಮೇತ



ವಿವರಿಸಿದ ಬಿ.ವಿ. ವಿಜಯೇಂದ್ರ ಹಾಗೂ ಆರ್. ಅಶೋಕ್ ಅವರು, ಅಡ್ಡ ಮತದಾನ ಮಾಡಿದವರನ್ನು ಪತ್ತೆಹಚ್ಚಲು ವಿಧಾನ ಪರಿಷತ್ ಸದಸ್ಯ ಹಾಗೂ ಹಿರಿಯ ನಾಯಕ ಸಿ.ಟಿ. ರವಿ ನೇತೃತ್ವದಲ್ಲಿ ಸತ್ಯ ಶೋಧನಾ ಸಮಿತಿಯನ್ನು ರಚಿಸಿದ್ದೇವೆ. ಈ ಸಮಿತಿಯು ಇನ್ನೆರಡು-ಮೂರು ದಿನಗಳಲ್ಲಿ ವರದಿ ನೀಡಲಿದೆ. ಈ ವರದಿಯನ್ನು ತಮಗೆ ಕಳುಹಿಸಿ ಕೊಡುತ್ತೇವೆ. ಅದರಂತೆ ಅಡ್ಡ ಮತದಾನ ಮಾಡಿದ ಶಾಸಕರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಿ ಎಂದು ಈ ಇಬ್ಬರು ನಾಯಕರು ಪಕ್ಷದ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ರವರಲ್ಲಿ ಭಿನ್ನವಿಸಿಕೊಂಡರು.

ವಿಧಾನ ಪರಿಷತ್ ಚುನಾವಣೆ ಸಂದರ್ಭದಲ್ಲಿ ಎಲ್ಲಾ ಶಾಸಕರಿಗೂ ಯಾರು ಯಾರಿಗೆ ಮತ ಹಾಕಬೇಕು ಎಂಬ ಬಗ್ಗೆ ನಿರ್ದಿಷ್ಟ ಸೂಚನೆಯನ್ನು ನೀಡಲಾಗಿತ್ತು. ಶಾಸಕರ ಸಭೆಯನ್ನು ನಡೆಸಿ ಎಲ್ಲವರನ್ನು ವಿವರಿಸಿದ್ದೆವು. ಆದರೂ ಕೆಲ ಶಾಸಕರು ಪಕ್ಷದ ಸೂಚನೆಯನ್ನು ವಿರೋಧಿಸಿ ಅಡ್ಡ ಮತದಾನ ಮಾಡಿದ್ದಾರೆ. ಇಂಥವರ ವಿರುದ್ಧ ಕ್ರಮ ಆಗಲೇ ಬೇಕು. 2ನೇಪುಟಕ್ಕೆ

# ಗೆಜ್ಜಲಗಟ್ಟಿ ಗ್ರಾಮ ಪಂಚಾಯತಿ ಕಾರ್ಯದರ್ಶಿಯಾಗಿ ಯಮನಪ್ಪ ಕುಂಬಾರ ಅಧಿಕಾರ ಸ್ವೀಕಾರ

ಧೈರ್ಯದ ದಾರಿ

**ಅರಕೇರಾ:** ದಿಂದಾ ಗೆಜ್ಜಲಗಟ್ಟಿಯವರಗೆ ಒಂದು ದಶಕದ ಸೇವೆ ಯಮನಪ್ಪ ಕುಂಬಾರ ಸಾರ್ವಜನಿಕ ಸೇವೆ ಎಂಬುವದು ಕೇವಲ ಒಂದು ವೃತ್ತಿಯಲ್ಲ.ಅದೊಂದು ಸಮರ್ಪಣೆ ಬದ್ದತೆ ಮತ್ತು ನಿರಂತರ ಶ್ರಮದ ಪ್ರೀತಿಕ.ಇಂತಹ ಸೇವಾ ಮನೋಭಾವಕ್ಕೆ ಉತ್ತಮ ಉದಾಹರಣೆ ಯಮನಪ್ಪ ಕುಂಬಾರ ಅವರ ವೃತಿ ಜೀವನ 2006ರಲ್ಲಿ ಅರಕೇರಾ ಗ್ರಾಮ ಪಂಚಾಯತಿಯಲ್ಲಿ ಬಿಲ್ ಕಲೆಕ್ಟರ್ ಆಗಿ ತಮ್ಮ ಸೇವಾ ಪಯಣವನ್ನು ಆರಂಭಿಸಿದರು.



ಲಿಂಗಸೂರು ತಾಲೂಕಿನ ಗೆಜ್ಜಲಗಟ್ಟಿ ಗ್ರಾಮ ಪಂಚಾಯತಿ ಕಾರ್ಯದರ್ಶಿಯಾಗಿ ಬಡ್ತಿಹೊಂದಿದ್ದಾರೆ ಅವರಿಗೆ ಹೊಸ ಸವಾಲುಗಳು ಮತ್ತು ಅವಕಾಶ ಕಾದಿವೆ. ಗೆಜ್ಜೆಲಗಟ್ಟಿ ಗ್ರಾಮದ ಅಭಿವೃದ್ದಿಗೆ ಸರಕಾರದ ಯೋಜನೆಗಳನ್ನು ಪರಿಣಾಮಲಾರಿಯಾಗಿ ಜಾರಿಗೋಳಿಸಲು.ಗ್ರಾಮಸ್ಥರ ಸಮಸ್ಯೆಗಳಿಗೆ ಸ್ಪಂದಿಸಲು ಮತ್ತು ಪಾರದರ್ಶಕ ಆಡಳಿತವನ್ನು ಒದಗಿಸಲು ಅವರ ಅನುಭವ ಮತ್ತು ದಕ್ಷತೆ ಸಹಕಾರಿಯಾಗಲಿದೆ

ಯಮನಪ್ಪ ಕುಂಬಾರ ಅವರ ಈಬಡ್ತಿ ಮತ್ತು ಹೊಸ ಹುದ್ದೆಯು ಸಣ್ಣ ಹುದ್ದೆಯಿಂದ ಆರಂಭಿಸಿ ತಮ್ಮ ಪ್ರಾಮಾಣಿಕ ಶ್ರಮ ಮತ್ತು ಬದ್ದತೆಯಿಂದ ಉನ್ನತ ಸ್ಥಾನಕ್ಕೆರಲು ಸಾಧ್ಯ ಎಂಬುವದಕ್ಕೆ ಉತ್ತಮ ನಿದರ್ಶನವಾಗಿದೆ.

# ಕೆಂಪೇಗೌಡ ಜಯಂತಿ ಆಚರಣೆಗೆ ಅಗತ್ಯ ಸಿದ್ಧತೆಗೆ ಅಪರ ಜಿಲ್ಲಾಧಿಕಾರಿ ಶಿವಾನಂದ ಸೂಚನೆ

ಧೈರ್ಯದ ದಾರಿ

**ರಾಯಚೂರು ಜೂನ್ 23:** ರಾಯಚೂರು ಜಿಲ್ಲಾಡಳಿತದಿಂದ ಕೆಂಪೇಗೌಡ ಜಯಂತಿ ಕಾರ್ಯಕ್ರಮ ಆಚರಣೆ ಸಂಬಂಧ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರ ಅಧ್ಯಕ್ಷತೆಯಲ್ಲಿ ಜೂನ್ 23ರ ಮಂಗಳವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಸಮುದಾಯದ ಮುಖಂಡರು, ವಿವಿಧ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ನಡೆಯಿತು.

ಇದೇ ವೇಳೆ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಮಾತನಾಡಿ, ನಾಡಿನ ಅಭಿವೃದ್ಧಿಗಾಗಿ ಜನಪರ ಯೋಜನೆಗಳನ್ನು ಜಾರಿಗೊಳಿಸಿದ ಕೆಂಪೇಗೌಡ ಅವರ ಪರಿಶ್ರಮದಿಂದ ಬೆಂಗಳೂರು ಇಂದು ವಿಶ್ವಮಟ್ಟದಲ್ಲಿ ಹೆಸರು ಗಳಿಸಿದೆ. ಸರ್ಕಾರದ ನಿರ್ದೇಶನದಂತೆ ಕೆಂಪೇಗೌಡ ಅವರ ಜೀವನ ಸಾಧನೆಗಳನ್ನು ಸ್ಮರಿಸುವ ಸಲುವಾಗಿ ಇದೇ ಜೂನ್ 27 ರಂದು ನಗರದಲ್ಲಿ ಕೆಂಪೇಗೌಡ ಜಯಂತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಜೂನ್ 27ರಂದು ನಗರದ ಪಂಡಿತ ಜಂಬಲದಿನ್ನಿ ರಂಗಮಂದಿರದಲ್ಲಿ ನಡೆಯುವ ಕಾರ್ಯಕ್ರಮಕ್ಕೆ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು. ಶಿಷ್ಠಾಚಾರಂತೆ ಆಹ್ವಾನ ಪತ್ರಿಕೆ ಮುದ್ರಿಸಿ ಗಣ್ಯರಿಗೆ ವಿತರಿಸಬೇಕು. ಅಂದು ರಂಗಮಂದಿರದ ಆವರಣದಲ್ಲಿ ಕುಡಿಯುವ ನೀರು ಸೇರಿದಂತೆ ಎಲ್ಲಾ ಅಗತ್ಯ ಏರ್ಪಾಡು



ಮಾಡಬೇಕು. ನಗರದ ಮುಖ್ಯ ರಸ್ತೆಗಳು ಮತ್ತು ಆವರಣದಲ್ಲಿ ಶುಚಿತ್ವ ಕಾಯ್ದುಕೊಳ್ಳಬೇಕು ಎಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಕಾರ್ಯಕ್ರಮ ಯಶಸಿಗೆ ಸಕಲ ಸಿದ್ಧತೆ ಮಾಡಿಕೊಳ್ಳಲು ಇಲಾಖಾವಾರು ಅಧಿಕಾರಿಗಳಿಗೆ ಜವಾಬ್ದಾರಿ ಹಂಚಿಕೆ ಮಾಡಲಾಗುವುದು. ಯಾವುದೇ ಲೋಪವಾಗದಂತೆ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು. ಶಾಲಾ ಹಾಗೂ ಕಾಲೇಜ್ ವಿದ್ಯಾರ್ಥಿಗಳಿಗೆ ವಿವಿಧ ಸ್ಪರ್ಧೆಗಳನ್ನು ಹಮ್ಮಿಕೊಂಡು ವಿಜೇತರಿಗೆ ಪ್ರಶಸ್ತಿ ಪ್ರಮಾಣ ಪತ್ರವನ್ನು ನೀಡಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ವೇಳೆ ಸಮಾಜ ಮುಖಂಡರು ಮಾತನಾಡಿ, ವೇದಿಕೆ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಬೇಕು. ಜನಪ್ರತಿನಿಧಿಗಳು, ಜಿಲ್ಲಾ ಮಟ್ಟದ ಅಧಿಕಾರಿ, ಸಿಬ್ಬಂದಿ ಕಾರ್ಯಕ್ರಮದಲ್ಲಿ ತಪ್ಪದೇ ಪಾಲ್ಗೊಳ್ಳಬೇಕು. ಕಾರ್ಯಕ್ರಮದಲ್ಲಿ ನಾಡಪ್ರಭು ಕೆಂಪೇಗೌಡ ಅವರ ಬಗ್ಗೆ ಉಪನ್ಯಾಸ ಏರ್ಪಡಿಸಬೇಕು ಎಂದು ಸಲಹೆ ಮಾಡಿದರು. ಕಾರ್ಯಕ್ರಮದಲ್ಲಿ ಕೆಂಪೇಗೌಡರ ವಿಚಾರಧಾರೆಗಳ ಕುರಿತು ಸಂಪನ್ಮೂಲ ವ್ಯಕ್ತಿಗಳಿಂದ ಉಪನ್ಯಾಸ, ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಸಾಧಕರಿಗೆ ಸನ್ಮಾನ ಹಾಗೂ ಎಸ್ಸೆಸ್ಸೆಲ್ಸಿ, ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಬೇಕು ಎಂದು ಇದೆ ವೇಳೆ ಸಮಾಜದ ಬಂಧುಗಳು ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ಮುಖಂಡರಾದ ಡಾ.ಬಿ.ವಿಜಯರಾಜೇಂದ್ರ, ನಾಗರಾಜ ವಕೀಲರು, ದೇವೇಂದ್ರಮ್ಮ ಟಿ.ಸಿ., ಕೆ.ಪಾರ್ವತಿ ಖಾಜಾನಗೌಡ, ಡಾ.ಶಾಂತಾ ಕುಲಕರ್ಣಿ, ರವೀಂದ್ರ ಪೊಲೀಸ್ ಪಾಟೀಲ್, ಮಹೇಶ ಬಿ. ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಇದ್ದರು.

# ಸಿಂಧನೂರು: ಜುಲೈ 02ರಂದು ಜಪ್ತಿ ಆಹಾರ ಧಾನ್ಯಗಳ ಬಹಿರಂಗ ಹರಾಜು

ಧೈರ್ಯದ ದಾರಿ

**ರಾಯಚೂರು ಜೂನ್ 23:** ಜಿಲ್ಲೆಯ ಸಿಂಧನೂರಿನ ಆಹಾರ ಇಲಾಖೆಯಿಂದ ಸಗಟು ಗೋದಾಮುಗಳಲ್ಲಿ ವಿವಿಧ ಪ್ರಕರಣಗಳಲ್ಲಿ ಜಪ್ತಿ ಮಾಡಲಾದ 47.29 ಕ್ವಿಂಟಾಲ್ ಅಕ್ಕಿ ಹಾಗೂ 217.78 ಕ್ವಿಂಟಾಲ್ ಜೋಳದ ಆಹಾರ ಧಾನ್ಯಗಳನ್ನು ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲು ಜುಲೈ 02ರ ಬೆಳಿಗ್ಗೆ 12ಗಂಟೆಗೆ ಸಿಂಧನೂರಿನ ಕೆ.ಎಫ್.ಸಿ.ಎಸ್.ಸಿ ಸಗಟು ಗೋದಾಮಿನಲ್ಲಿ ಬಹಿರಂಗ ಹರಾಜು ಹಮ್ಮಿಕೊಳ್ಳಲಾಗಿದ್ದು, ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬಹುದಾಗಿದೆ. ಬಹಿರಂಗ ಹರಾಜು ಷರತ್ತುಗಳು: ಹರಾಜಿನಲ್ಲಿ ಭಾಗವಹಿಸುವ ಬಿಡ್ಡುದಾರರು ಎಪಿಎಂಸಿ ಪರವಾನಿಗೆದಾರರು ಅಥವಾ ಪರವಾನಿಗೆ ಪಡೆದ ಸಗಟು ಅಥವಾ ಚಿಲ್ಲರೆ ವ್ಯಾಪಾರಿಗಳು, ಕಮಿಷನ್ ಏಜೆಂಟರ್, ಅಕ್ಕಿ ಗಿರಣಿ ಮಾಲೀಕರು ಹಾಗೂ ದೊಡ್ಡ ಪ್ರಮಾಣದಾರ ಬಳಕೆದಾರ ಸಂಸ್ಥೆಗಳು ಆಗಿರಬೇಕು. ಹರಾಜಿನಲ್ಲಿ ಭಾಗವಹಿಸುವ ಬಿಡ್ಡುದಾರರು ಬಹಿರಂಗ ಹರಾಜು ದಿನ ಪೂರ್ವಾಹ್ನ 11.30ಗಂಟೆಯೊಳಗಾಗಿ ಹರಾಜು ಸ್ಥಳದಲ್ಲಿ ಹಾಜರಾಗಿ ಹೆಸರನ್ನು ನೋಂದಾಯಿಸಿಕೊಳ್ಳುವುದು, ಹಾಗೂ 20,000 ರೂ.ಗಳನ್ನು (ಇಪತ್ತು ಸಾವಿರ ರೂಗಳ) 2ನೇಪುಟಕ್ಕೆ

ಮೊದಲನೇ ಪುಟದಿಂದ

# ಅಡ್ಡ ಮತದಾನ: ಬಿಜೆಪಿ ಕಠಿಣ ಕ್ರಮಕ್ಕೆ ಸಜ್ಜು

ಕಠಿಣ ಕ್ರಮದ ಮೂಲಕ ಒಂದು ಖಡಕ್ ಎಚ್ಚರಿಕೆಯನ್ನು ನೀಡುವ ಅಗತ್ಯವಿದೆ ಎಂದು ಈ ಇಬ್ಬರು ನಾಯಕರು ವರಿಷ್ಠರ ಮುಂದೆ ಪ್ರತಿಪಾದಿಸಿದರು.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ಆರ್. ಅಶೋಕ್ ರವರ ವಿವರಣೆಯನ್ನು ಆಲಿಸಿದ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಅವರು ಸತ್ಯಶೋಧನಾ ಸಮಿತಿ ವರದಿ ಬಂದ ನಂತರ ಅಡ್ಡ ಮತದಾನ ಮಾಡಿದ ಶಾಸಕರ ವಿರುದ್ಧ ಕ್ರಮ ಕೈಗೊಳ್ಳೋಣ. ಪಕ್ಷದಲ್ಲಿ ಶಿಸ್ತು ಮುಖ್ಯ, ಪಕ್ಷಕ್ಕೆ ದ್ರೋಹ ಮಾಡಿದವರನ್ನು ಕ್ಷಮಿಸುವ ಪ್ರಶ್ನೆಯೇ ಇಲ್ಲ ಎಂದು ಸ್ಪಷ್ಟಪಡಿಸಿದರು ಎನ್ನಲಾಗಿದೆ.

ಅಡ್ಡ ಮತದಾನ ಮಾಡಿದ ನಂತರ ರಾಜಕೀಯ ಬೆಳವಣಿಗೆಗಳು, ಮೈತ್ರಿ ಪಕ್ಷದ ನಾಯಕ ಕೇಂದ್ರ ಸಚಿವ ಕುಮಾರಸ್ವಾಮಿಯವರ ಮಾತುಗಳು ಎಲ್ಲದರ ಬಗ್ಗೆಯೂ ಈ ಇಬ್ಬರು ನಾಯಕರುಗಳು ನಿತಿನ್ ನಬಿನ್ ರವರೊಂದಿಗೆ ಚರ್ಚಿಸಿದರು ಎನ್ನಲಾಗಿದೆ.

ಪಕ್ಷದಲ್ಲಿನ ಕೆಳ ಬೆಳವಣಿಗೆಗಳ ಬಗ್ಗೆಯೂ ಈ ಇಬ್ಬರು ನಾಯಕರು ವರಿಷ್ಠರ ಜತೆ ಚರ್ಚಿಸಿ ಕೆಲ ಮುಖಂಡರುಗಳು ಪಕ್ಷದ ವಿರುದ್ಧ ಪಕ್ಷ ವಿರೋಧಿ ಹೇಳಿಕೆಗಳನ್ನು ನೀಡುತ್ತಿರುವುದನ್ನು ಗಮನಕ್ಕೆ ತಂದು ಇವರ ವಿರುದ್ಧವೂ ಕ್ರಮಕ್ಕೆ ಮನವಿ ಮಾಡಿದರು ಎಂದು ಹೇಳಲಾಗಿದೆ.

**ಶಾಸಕರಿಗೆ ನೋಟಿಸ್: ಅಮಾನತ್ತು**

ವಿಧಾನ ಪರಿಷತ್ ಚುನಾವಣೆಯಲ್ಲಿ ಅಡ್ಡ ಮತದಾನ ಮಾಡಿರುವ ಶಾಸಕರಿಗೆ ನೋಟಿಸ್ ಜಾರಿ ಮಾಡಿ ವಿವರಣೆ ಕೇಳಿ ಅವರನ್ನು ಅಮಾನತ್ತು ಮಾಡುವ ಸಾಧ್ಯತೆ ಇದೆ.

ಅಡ್ಡ ಮತದಾನ ಮಾಡಿರುವ ಶಾಸಕರನ್ನು ಪತ್ತೆ ಹಚ್ಚಲು ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ನೇತೃತ್ವದಲ್ಲಿ ರಚಿಸಲಾಗಿರುವ ಸತ್ಯಶೋಧನಾ ಸಮಿತಿ ಇನ್ನೆರಡು ಮೂರು ದಿನಗಳಲ್ಲಿ ವರದಿ ನೀಡಲಿದ್ದು, ಈ ವರದಿ ಆಧರಿಸಿ ಅಡ್ಡ ಮತದಾನ ಮಾಡಿರುವ ಶಾಸಕರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು

ಪಕ್ಷದ ವರಿಷ್ಠರು ನಿರ್ಧರಿಸಿದ್ದಾರೆ. ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ಪ್ರತಿಪಕ್ಷ ನಾಯಕ ಆರ್. ಅಶೋಕ್ ಅವರು ಇಂದು ಪಕ್ಷದ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಅವರನ್ನು ಭೇಟಿ ಮಾಡಿ ಎಲ್ಲ ವಿವರಣೆಗಳನ್ನು ನೀಡಿದ್ದು, ಎಲ್ಲವನ್ನು ಆಲಿಸಿರುವ ವರಿಷ್ಠರು ಅಡ್ಡ

ಮತದಾನ ಮಾಡಿರುವ ಶಾಸಕರ ವಿರುದ್ಧ ಗರಂ ಆಗಿದ್ದು, ಕಠಿಣ ಕ್ರಮ ಕೈಗೊಳ್ಳುವ ಭರವಸೆಯನ್ನು ನೀಡಿದ್ದಾರೆ.

ಸಿ.ಟಿ. ರವಿ ಸಮಿತಿಯ ವರದಿ ಬಂದ ನಂತರ ಅಡ್ಡ ಮತದಾನ ಮಾಡಿರುವ ಶಾಸಕರುಗಳಿಗೆ ನೋಟಿಸ್ ಜಾರಿ ಮಾಡಿ ವಿವರಣೆ ಕೇಳಿ, ನಂತರ ಅವರನ್ನು ಪಕ್ಷದಿಂದ ಅಮಾನತ್ತು ಅಥವಾ ಉಚ್ಚಾಟನೆ ಮಾಡುವ ಕಠಿಣ ಕ್ರಮವನ್ನು ಬಿಜೆಪಿ ವರಿಷ್ಠರು ಕೈಗೊಳ್ಳಲಿದ್ದಾರೆ ಎಂದು ಹೇಳಲಾಗಿದೆ.

ಸುರೇಶ್‌ಕುಮಾರ್, ಸದಾನಂದಗೌಡ ವಿರುದ್ಧವೂ ಗರಂ

ಅಡ್ಡ ಮತದಾನ ಮಾಡಿದ ಶಾಸಕರನ್ನು ಪತ್ತೆಹಚ್ಚಲು ಧರ್ಮಸ್ಥಳದಲ್ಲಿ ಆಣೆ ಪ್ರಮಾಣ ಮಾಡಿಸಲು ನಿರ್ಧರಿಸಿದ್ದ ಪಕ್ಷದ ರಾಜ್ಯಾಧ್ಯಕ್ಷರ ತೀರ್ಮಾನದ ಬಗ್ಗೆ ಬಹಿರಂಗವಾಗಿಯೇ ಸಾಮಾಜಿಕ ಜಾಲತಾಣದಲ್ಲಿ ಅಸಮಾಧಾನ ಹೊರ ಹಾಕಿದ್ದ ಶಾಸಕ ಸುರೇಶ್‌ಕುಮಾರ್ ವಿರುದ್ಧ ವರಿಷ್ಠರು ಸಿಟ್ಟಾಗಿದ್ದಾರೆ ಎನ್ನಲಾಗಿದೆ.

ಪಕ್ಷದ ಆಂತರಿಕ ವಿಚಾರವನ್ನು ಸಾಮಾಜಿಕ ಜಾಲತಾಣದಲ್ಲಿ ಬಹಿರಂಗವಾಗಿ ಹೇಳುವ ಬದಲು ಪಕ್ಷದ ಅಧ್ಯಕ್ಷರನ್ನು ಭೇಟಿ ಮಾಡಿ, ಇಲ್ಲವೇ ದೂರವಾಣಿಯಲ್ಲಿ ಮಾತನಾಡಿ ಧರ್ಮಸ್ಥಳದಲ್ಲಿ ಸಭೆ ಬೇಡ ಎಂದು ಹೇಳಬಹುದಿತ್ತು. ಅದು ಬಿಟ್ಟು ಫೇಸ್‌ಬುಕ್‌ನಲ್ಲಿ ಈ ಬಗ್ಗೆ ಅಸಮಾಧಾನ ಹೊರ ಹಾಕಿದ್ದು ಸರಿಯಲ್ಲ ಎಂದು ವರಿಷ್ಠರು ಸುರೇಶ್‌ಕುಮಾರ್ ವಿರುದ್ಧವೂ ಗರಂ ಆಗಿದ್ದಾರೆ ಎನ್ನಲಾಗಿದೆ.

ಪರಿಷತ್ ಚುನಾವಣೆಯಲ್ಲಿ ಶಾಸಕರು ಅಡ್ಡ ಮತದಾನ ಮಾಡುವುದು ತಮಗೆ ಮೊದಲೇ ಗೊತ್ತಿತ್ತು. ಕಾಂಗ್ರೆಸ್ ಮತ್ತು ಬಿಜೆಪಿಯ ಕೆಲ ನಾಯಕರು ಚುನಾವಣೆಗೂ ಮುನ್ನ ರಹಸ್ಯ ಸಭೆ ನಡೆಸಿದ್ದರು ಎಂದು ಹೇಳಿರುವ ಮಾಜಿ ಮುಖ್ಯಮಂತ್ರಿ ಸದಾನಂದಗೌಡ ವಿರುದ್ಧವೂ ವರಿಷ್ಠರು ಸಿಟ್ಟಾಗಿದ್ದಾರೆ.

ಒಬ್ಬ ಮಾಜಿ ಮುಖ್ಯಮಂತ್ರಿಯಾಗಿ, ಕೋರ್ ಕಮಿಟಿ ಸದಸ್ಯರಾಗಿರುವ ಸದಾನಂದಗೌಡ ಅವರು ಅಡ್ಡ ಮತದಾನ ಆಗುವ ಮಾಹಿತಿ ಗೊತ್ತಿದ್ದರೂ ಅದನ್ನು ಪಕ್ಷದ ಗಮನಕ್ಕೆ ತರದೆ ಅಡ್ಡ ಮತದಾನವಾದ ಮೇಲೆ ತಮಗೆ ಮೊದಲೇ ಗೊತ್ತಿತ್ತು ಎಂದು ಹೇಳಿರುವುದು ವರಿಷ್ಠರ ಸಿಟ್ಟಿಗೆ ಕಾರಣವಾಗಿದೆ.

ಈ ವಿಚಾರ ಗೊತ್ತಿದ್ದರೂ ಅದನ್ನು ಪಕ್ಷದ ನಾಯಕರ ಗಮನಕ್ಕೆ ತರದ ಸದಾನಂದಗೌಡರ ನಡವಳಿಕೆ ಬಗ್ಗೆಯೂ ವರಿಷ್ಠರು ಅಸಮಾಧಾನಗೊಂಡಿದ್ದಾರೆ ಎಂದು ಹೇಳಲಾಗಿದ್ದು, ಮುಂದೆ ಯಾರೇ ಪಕ್ಷದ ಆಂತರಿಕ ವಿಚಾರಗಳ ಬಗ್ಗೆ ಬಹಿರಂಗವಾಗಿ ಮಾತನಾಡಿದರೆ ಅವರ ವಿರುದ್ಧವೂ ಕ್ರಮ ಕೈಗೊಳ್ಳುವ ಎಚ್ಚರಿಕೆಯನ್ನು ವರಿಷ್ಠರು ನೀಡಲಿದ್ದಾರೆ ಎಂದು ಬಿಜೆಪಿ ಮೂಲಗಳು ಹೇಳಿವೆ.

# ಸಿಂಧನೂರು: ಜುಲೈ 02ರಂದು ಜಪ್ತಿ ಆಹಾರ ಧಾನ್ಯಗಳ ಬಹಿರಂಗ ಹರಾಜು

ಇ.ಎಂ.ಡಿ ಮೊತ್ತವನ್ನು ಮುಂಗಡವಾಗಿ ಪಾವತಿಸಬೇಕು. ಇ.ಎಂ.ಡಿ ಮೊತ್ತವನ್ನು ಜಿಲ್ಲಾಧಿಕಾರಿಗಳು ರಾಯಚೂರು ಅವರ ಹೆಸರಿನಲ್ಲಿ ಡಿಡಿ ಮೂಲಕ ಪಾವತಿಸತಕ್ಕದ್ದು. ಹರಾಜಿನಲ್ಲಿ ಭಾಗವಹಿಸುವ ಬಿಡ್ಡುದಾರರು ಎರಡು ಪಾಸ್ ಪೋರ್ಟ್ ಸೈಜ್ ಭಾವಚಿತ್ರ, ಪರವಾನಿಗೆ ತಮ್ಮ ವ್ಯಾಪಾರಿ ನೋಂದಣಿ ಪತ್ರ ಅಥವಾ ಸಂಸ್ಥೆ ನೋಂದಣಿ ಪತ್ರ, ಆಧಾರ್ ಕಾರ್ಡಿನ ಪ್ರತಿಯನ್ನು ಹಾಜರುಪಡಿಸಿ ಹರಾಜಿನಲ್ಲಿ ಭಾಗವಹಿಸುವುದು.

ಹರಾಜು ಮುಗಿದ ನಂತರ ಠೇವಣಿ ಮೊತ್ತವನ್ನು ಗರಿಷ್ಠ ಹಾಗೂ ಎರಡನೇ ಗರಿಷ್ಠ ಬಿಡ್ಡುದಾರರನ್ನು ಹೊರತುಪಡಿಸಿ ಉಳಿದ ಬಿಡ್ಡುದಾರರಿಗೆ ಸ್ಥಳದಲ್ಲಿಯೇ ಹಿಂದಿರುಗಿಸಲಾಗುವುದು. ಗರಿಷ್ಠ ಬಿಡ್ಡುದಾರರು ನಿಗದಿತ ಅವದಿಯೊಳಗೆ ಪೂರ್ಣ ಹಣವನ್ನು ಪಾವತಿಸಲು ವಿಫಲವಾದಲ್ಲಿ ಠೇವಣಿ ಹಣವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು ನಂತರ ಎರಡನೇ ಬಿಡ್ಡುದಾರರಿಗೆ ಅವಕಾಶ ಮಾಡಿಕೊಡಲಾಗುವುದು ಇವರಿಗೆ ಸಹ ಇದೇ ನಿಯಮ ಅನ್ವಯವಾಗುತ್ತದೆ.

ಅಗತ್ಯ ವಸ್ತುಗಳ ಕಾಯ್ದೆಯಡಿಯಲ್ಲಿ ಪ್ರಕರಣಕ್ಕೆ ಒಳಗಾಗಿರುವ ವ್ಯಕ್ತಿ, ಸಂಸ್ಥೆಗಳು, ವ್ಯಾಪಾರಿಗಳು, ಸಾರ್ವಜನಿಕ ವಿತರಣಾ ಪದ್ಧತಿ ವ್ಯವಸ್ಥೆಯಡಿಯಲ್ಲಿ ಕೆಲಸ ನಿರ್ವಹಿಸುತ್ತಿರುವವರು ಹರಾಜಿನಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ.

ಜಪ್ತಿ ಮಾಡಲಾದ ಆಹಾರ ಧಾನ್ಯಗಳನ್ನು ಎಲ್ಲಿದೆಯೋ ಅಲ್ಲಿ ಹಾಗೂ ಹೇಗಿವೆಯೋ ಹಾಗೆ ಷರತ್ತಿನಡಿ ಹರಾಜು ಮಾಡಲಾಗುತ್ತಿರುವುದರಿಂದ ಹರಾಜಿನಲ್ಲಿ ಭಾಗವಹಿಸುವವರು ಅದಕ್ಕೂ ಮುನ್ನ ತಾಲ್ಲೂಕಿನ ಸಗಟು ಗೋದಾಮುಗಳಿಗೆ ಪೂರ್ವಾಹ್ನ 11ಗಂಟೆಗೆಯೊಳಗೆ ಭೇಟಿ ನೀಡಿ ಆಹಾರ ಧಾನ್ಯಗಳ ಗುಣಮಟ್ಟವನ್ನು ಪರಿಶೀಲನೆ ಮಾಡತಕ್ಕದ್ದು.

ಬಹಿರಂಗ ಹರಾಜಿನಲ್ಲಿ ಬರುವ ಸ್ಪರ್ಧಾತ್ಮಕ ದರಗಳನ್ನು ಒಪ್ಪುವ ಅಥವಾ ತಿರಸ್ಕರಿಸುವ ಅಥವಾ ಈ ಹರಾಜವನ್ನು ರದ್ದುಪಡಿಸುವ ಅಧಿಕಾರವನ್ನು ಕಾಯ್ದಿರಿಸಲಾಗಿದೆ. ಆಯಾ ತಾಲ್ಲೂಕಿನ ತಹಶೀಲ್ದಾರರು, ಆಹಾರ ಸಿಬ್ಬಂದಿಯವರು ಮತ್ತು ಗೋದಾಮು ವ್ಯವಸ್ಥಾಪಕರು, ಕೆ.ಎಫ್.ಸಿ.ಎಸ್.ಸಿ ರವರ ಸಮಕ್ಷಮದಲ್ಲಿ ಬಹಿರಂಗ ಹರಾಜನ್ನು ಮಾಡಲಾಗುವುದು.

ಬಿಡ್‌ನಲ್ಲಿ ನಮೂದಾಗುವ ದರಗಳನ್ನು

ಜಿಲ್ಲಾಧಿಕಾರಿಗಳು ಅನುಮೋದಿಸಿದ ನಂತರ ಬಿಡ್‌ನ ಒಟ್ಟು ಮೌಲ್ಯವನ್ನು ಸರ್ಕಾರದ ಲೆಕ್ಕ ಶೀರ್ಷಿಕೆಗೆ ನಿಗದಿತ ದಿನಾಂಕದೊಳಗಾಗಿ ಜಮಾ ಮಾಡಿ ಚಲನದ ಹರಾಜುಪಡಿಸಿದ ನಂತರ ಹರಾಜಾದ ಪದಾರ್ಥ ಎತ್ತುವಳಿಗೆ ಅವಕಾಶ ನೀಡಲಾಗುವುದು.

ಎಪಿಎಂಸಿ ಸೆಸ್ ಮತ್ತು ಇತರೆ ಯಾವುದಾದರೂ ಶುಲ್ಕವನ್ನು ಸರ್ಕಾರಕ್ಕೆ ಕಟ್ಟಬೇಕಾದಲ್ಲಿ ಹರಾಜಿನಲ್ಲಿ ಆಯ್ಕೆಯಾದ ಬಿಡ್‌ದಾರರ ಪಾವತಿಸತಕ್ಕದ್ದು. ಬಹಿರಂಗ ಹರಾಜಾದ ಆಹಾರ ಧಾನ್ಯಗಳನ್ನು ತಮ್ಮ ಸ್ವಂತ ಖರ್ಚಿನಲ್ಲಿ ಆದೇಶ ನೀಡಿದ 3 ದಿನಗಳಲ್ಲಿ ತಾಲ್ಲೂಕಿನ ಸಗಟು ಗೋದಾಮುಗಳಿಂದ ಎತ್ತುವಳಿ ಮಾಡಬೇಕು.

ಹೆಚ್ಚಿನ ಮಾಹಿತಿ ಅಥವಾ ಷರತ್ತುಗಳನ್ನು ಉಪ ನಿರ್ದೇಶಕರ ಕಚೇರಿ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ರಾಯಚೂರು, ಅಥವಾ ಕರ್ನಾಟಕ ಆಹಾರ ನಾಗರಿಕ ಸರಬರಾಜು ನಿಗಮ ನಿಯಮಿತದ ಜಿಲ್ಲಾ ವ್ಯವಸ್ಥಾಪಕರು ರಾಯಚೂರು ಅಥವಾ ಜಿಲ್ಲೆಯ ಎಲ್ಲಾ ತಹಶೀಲ್ದಾರರ ಕಚೇರಿಗಳಿಗೆ ಭೇಟಿ ನೀಡಿ ವಿವರಗಳನ್ನು ಪಡೆಯಬಹುದಾಗಿದೆ ಎಂದು ಸಿಂಧನೂರು ತಹಶೀಲ್ದಾರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸುದ್ದಿ ಮತ್ತು ಜಾಹೀರಾತಿಗಾಗಿ
ಸಂಪರ್ಕಿಸಿ
6360866626

# ಜೂನ್ 28 ರಂದು ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ



**ಧಾರವಾಡ, ಜೂ.23:** ಜಿಲ್ಲೆಯಾದ್ಯಂತ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಜೂನ್ 28, 2026 ರಂದು ಹಮ್ಮಿಕೊಳ್ಳಲಾಗಿದ್ದು, 0 ರಿಂದ 5 ವರ್ಷದೊಳಗಿನ ಎಲ್ಲ ಮಕ್ಕಳಿಗೆ ಪೋಲಿಯೋ ಲಸಿಕೆ ನೀಡಲಾಗುವುದು. ನಂತರ ಆರೋಗ್ಯ ಕಾರ್ಯಕರ್ತರು ಮನೆ ಮನೆಗೆ ಭೇಟಿ ನೀಡಿ ಯಾವುದೇ ಮಗು ಲಸಿಕೆಯಿಂದ ವಂಚಿತವಾಗದಂತೆ ಕ್ರಮವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ ಅವರು ಹೇಳಿದರು.

ಅವರು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ರಾಷ್ಟ್ರೀಯ ಪಲ್ಸ ಪೋಲಿಯೋ 2026 ಕಾರ್ಯಕ್ರಮದ ಜಿಲ್ಲಾ ಮಟ್ಟದ ಟಾಸ್ಕೋಸ್ ಸಮಿತಿ ಸಭೆ ಜರುಗಿಸಿ, ಮಾತನಾಡಿದರು.

ಪಲ್ಸ್ ಪೋಲಿಯೋ ಕಾರ್ಯಕ್ರಮದಡಿ ಜಿಲ್ಲೆಯ ಎಲ್ಲ ಅರ್ಹ ಮಕ್ಕಳಿಗೆ ಕಡ್ಡಾಯವಾಗಿ ಎರಡು ಹನಿ ಪೋಲಿಯೋ ಲಸಿಕೆ ನೀಡಬೇಕು. ಗ್ರಾಮೀಣ ಪ್ರದೇಶದಲ್ಲಿ ಜೂನ್ 29, 2026 ರಿಂದ ಜೂನ್ 30, 2026 ರವರೆಗೆ ಹಾಗೂ ನಗರ ಪ್ರದೇಶದಲ್ಲಿ ಜೂನ್ 29, 2026 ರಿಂದ ಜುಲೈ 1, 2026 ವರೆಗೆ ಮನೆ ಮನೆ ಭೇಟಿ ಮೂಲಕ ಆರೋಗ್ಯ ಕಾರ್ಯಕರ್ತರು 0–5 ವರ್ಷದ ಮಕ್ಕಳಿಗೆ ಲಸಿಕೆ ನೀಡುವ ಕಾರ್ಯವನ್ನು ಸಮರ್ಪಕವಾಗಿ ಕೈಗೊಳ್ಳಬೇಕು ಎಂದು ಸೂಚಿಸಿದರು.

ಜಿಲ್ಲೆಯಲ್ಲಿ 5 ವರ್ಷದೊಳಗಿನ 2,08,779 ಮಕ್ಕಳಿಗೆ ಲಸಿಕೆ ನೀಡುವ ಗುರಿ ಹೊಂದಲಾಗಿದ್ದು, 889 ಲಸಿಕಾ ಕೇಂದ್ರಗಳಿವೆ. 96 ಟ್ರಾಂಜಿಸ್ಟ್ ತಂಡಗಳು ಹಾಗೂ 57 ಮೊಬೈಲ್ ತಂಡಗಳನ್ನು ನಿಯೋಜಿಸಲಾಗಿದೆ. ಕಾರ್ಯಕ್ರಮಕ್ಕಾಗಿ 3,862 ವ್ಯಾಕ್ಸಿನೇರ್ಗಳು ಮತ್ತು 218 ಮೇಲ್ವಿಚಾರಕರು ಕಾರ್ಯನಿರ್ವಹಿಸಲಿದ್ದಾರೆ ಎಂದು ಅವರು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ವ್ಯಾಪಕ ಪ್ರಚಾರ ಕೈಗೊಳ್ಳಬೇಕು. ಅಂಗನವಾಡಿ ಕೇಂದ್ರಗಳಲ್ಲಿ ಕರಪತ್ರ ಹಾಗೂ ಬ್ಯಾನರ್‌ಗಳನ್ನು ಪ್ರದರ್ಶಿಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು. ಗ್ರಾಮಗಳಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮದ ಕುರಿತು ಅರಿವು ಮೂಡಿಸುವ ಜಾಥಾ ಕಾರ್ಯಕ್ರಮ ಹಮ್ಮಿಕೊಳ್ಳಬೇಕು ಎಂದು ಸಭೆಯಲ್ಲಿ ಸೂಚಿಸಿದರು. ಕಾರ್ಯಕ್ರಮದ ಯಶಸ್ವಿ ಅನುಷ್ಠಾನಕ್ಕಾಗಿ ಜಿಲ್ಲೆಗೆ ಒಟ್ಟು 189 ವಾಹನಗಳ ಅಗತ್ಯವಿದ್ದು, ವಿವಿಧ ತಾಲೂಕುಗಳಿಗೆ ಅವಶ್ಯಕತೆ ಅನುಸಾರ ವಾಹನಗಳನ್ನು ನಿಯೋಜಿಸಲಾಗುವುದು. ಬಸ್ ನಿಲ್ದಾಣಗಳಲ್ಲಿ ಆರೋಗ್ಯ ಇಲಾಖೆಯ ಖಿಡಿಚಿಘಿಣ ತಂಡಗಳ ಮುಖಾಂತರ ಮಕ್ಕಳಿಗೆ ಲಸಿಕೆ ಹಾಕಲು ಕ್ರಮವಹಿಸಬೇಕು. ಹಾಗೂ ಬಿಆರ್‌ಟಿಎಸ್ ನಿಲ್ದಾಣಗಳಲ್ಲಿ ಹಾಗೂ ರೈಲ್ವೆ ನಿಲ್ದಾಣಗಳಲ್ಲಿ ಪೋಲಿಯೋ ಬೂತ್‌ಗಳನ್ನು ತೆರೆಯುವುದು ಮತ್ತು ನಿಲ್ದಾಣಗಳಲ್ಲಿನ ವಿದ್ಯುತ್ ಮಾಹಿತಿ ಫಲಕದಲ್ಲಿ ಎಲ್ಲ 0–5 ವರ್ಷದೊಳಗಿನ ಮಕ್ಕಳಿಗೆ ಲಸಿಕೆ ಹಾಕಿಸಿಕೊಳ್ಳುವಂತೆ ಪ್ರಕಟಣೆ ಹೊರಡಿಸುವಂತೆ ಕ್ರಮವಹಿಸಲು ತಿಳಿಸಿದರು.

ಲಸಿಕೆಯನ್ನು ಸುರಕ್ಷಿತವಾಗಿಡಲು ಹಾಗೂ ಶೀತಲ ಪ್ಯಾಕ್‌ಗಳನ್ನು ತಯಾರಿಸಲು ನಿರಂತರ ವಿದ್ಯುಚ್ಛಕ್ತಿಯು ಅವಶ್ಯಕತೆ ಇರುವುದರಿಂದ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಮುದಾಯ ಆರೋಗ್ಯ ಕೇಂದ್ರದ ಪ್ರದೇಶಗಳಲ್ಲಿ ಪಲ್ಸ್ ಪೋಲಿಯೋ ದಿನಾಂಕದ ಹಿಂದಿನ ಒಂದು ವಾರದಿಂದ ಮುಂದಿನ ಮೂರು ದಿನಗಳವರೆಗೆ ವಿದ್ಯುಚ್ಛಕ್ತಿ ನಿರಂತರವಾಗಿ ಸರಬರಾಜು ಮಾಡುವಂತೆ ಅಧಿಕಾರಿಗಳು ಕ್ರಮವಹಿಸಬೇಕು. ಅದರಂತೆ ಆರೋಗ್ಯ ಇಲಾಖೆ, ವಿವಿಧ ಇಲಾಖೆಗಳ ಸಿಬ್ಬಂದಿಗಳು ಅಭಿಯಾನದ ಯಶಸ್ಸಿಗೆ ಕೈಜೋಡಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಪಲ್ಸ್ ಪೋಲಿಯೋ ಅಭಿಯಾನದ ಬಿತ್ತಿಪತ್ರವನ್ನು ಎಲ್ಲ ಅಧಿಕಾರಿಗಳು ಸೇರಿ ಬಿಡುಗಡೆ ಮಾಡಿದರು.

ಸಭೆಯಲ್ಲಿ ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಪರಶುರಾಮ ಎಫ್.ಕೆ., ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಡಾ.ಬಿ.ಆರ್. ಪಾತ್ರೋಟ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಸಂಗಪ್ಪ ಗಾಬಿ, ಆರೋಗ್ಯ ಇಲಾಖೆಯ ಕಾರ್ಯಕ್ರಮ ಅಧಿಕಾರಿ ಡಾ. ಶಶಿಧರ ಕಳಸೂರಮಠ, ಧಾರವಾಡ ತಾಲೂಕಾ ವೈದ್ಯಾಧಿಕಾರಿ ಡಾ.ಕೆ.ಎನ್.ತನುಜಾ, ಡಿ.ಎವ್.ಓ ಡಾ.ಮಂಜುನಾಥ ಸೊಪ್ಪಿನಮಠ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಟೆಲಿಗ್ರಾಮ್ ಸೇವೆ ಭಾಗಶಃ ಪುನರಾರಂಭ




**ನವದೆಹಲಿ.ಜೂ23**–ನೀಟ್ ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆ ವಿವಾದದ ಹಿನ್ನೆಲೆಯಲ್ಲಿ ದೇಶಾದ್ಯಂತ ತಾತ್ಕಾಲಿಕವಾಗಿ ನಿಷೇಧಕ್ಕೊಳಗಾಗಿದ್ದ ಪ್ರಮುಖ ಮೆಸೇಜಿಂಗ್ ಆಪ್ 'ಟೆಲಿಗ್ರಾಮ್' ಇದೀಗ ಕೆಲವು ಬಳಕೆದಾರರಿಗೆ ಮರಳಿ ಲಭ್ಯವಾಗುತ್ತಿದೆ. ಜೂನ್ 21 ರಂದು ಯಶಸ್ವಿಯಾಗಿ ನೀಟ್ ಮರುಪರೀಕ್ಷೆ ಮುಕ್ತಾಯಗೊಂಡ ಬೆನ್ನಲ್ಲೇ ಈ ಬೆಳವಣಿಗೆ ನಡೆದಿದೆ.

ವಿಶ್ವಾಸಾರ್ಹ ಮೂಲಗಳ ಪ್ರಕಾರ, ಈಗಾಗಲೇ ಮೊಬೈಲ್‌ನಲ್ಲಿ ಆಪ್ ಹೊಂದಿರುವ ಅಸ್ತಿತ್ವದಲ್ಲಿರುವ ಬಳಕೆದಾರರಿಗೆ ಸೇವೆಗಳು ಪುನರಾರಂಭಗೊಂಡಿವೆ. ಆದರೆ, ಆಪಲ್‌ನ ಆಪ್ ಸ್ಟೋರ್‌ನಲ್ಲಿ ಹೊಸದಾಗಿ ಡೌನ್‌ಲೋಡ್ ಮಾಡಲು ಇದು ಇನ್ನೂ ಲಭ್ಯವಾಗಿಲ್ಲ. ಇತ್ತೀಚಿನ ವರದಿಗಳ ಪ್ರಕಾರ ಆಂಡ್ರಾಯ್ಡ್‌ನ ಗೂಗಲ್ ಪ್ಲೇ ಸ್ಟೋರ್‌ನಲ್ಲಿ ಮಾತ್ರ ಇದು ಗೋಚರಿಸುತ್ತಿದೆ. ಜೂನ್ 22 ರವರೆಗೆ ವಿಧಿಸಲಾಗಿದ್ದ ಈ ತಾತ್ಕಾಲಿಕ ನಿಷೇಧವನ್ನು ವಿಸ್ತರಿಸುವ ಕುರಿತು ಕೇಂದ್ರ ಸರ್ಕಾರದಿಂದ ಯಾವುದೇ ಹೊಸ ಪ್ರಕಟಣೆ ಹೊರಬಿದ್ದಿಲ್ಲ.

ಮೆಸೇಜ್ ಎಡಿಟಿಂಗ್ ವೈಶಿಷ್ಟ್ಯಕ್ಕೆ ಜೂನ್ 30 ರವರೆಗೆ ನಿರ್ಬಂಧ ಮಾತ್ರವಲ್ಲದೆ ಆಪ್‌ನಲ್ಲಿ ಸಂದೇಶಗಳನ್ನು ಫಾರ್ವರ್ಡಿಸುವ ವೈಶಿಷ್ಟ್ಯವನ್ನು ಜೂನ್ 30 ರವರೆಗೆ ಸ್ಥಗಿತಗೊಳಿಸುವಂತೆ ಟೆಲಿಗ್ರಾಮ್ ಸಂಸ್ಥೆಗೆ ಸರ್ಕಾರ ಸೂಚಿಸಿದೆ. ಸುಳ್ಳು ಸುದ್ದಿ ಹರಡುವುದನ್ನು ತಡೆಯಲು ಮತ್ತು ಸಾಕ್ಷ್ಯ ನಾಶಪಡಿಸುವುದನ್ನು ತಡೆಗಟ್ಟಲು ಈ ಕಠಿಣ ಕ್ರಮ ಕೈಗೊಳ್ಳಲಾಗಿದೆ.

ಕೇಂದ್ರ ಸರ್ಕಾರದ ಈ ದಿಢೀರ್ ನಿರ್ಬಂಧದ ಕ್ರಮವನ್ನು ಟೆಲಿಗ್ರಾಮ್ ಸಂಸ್ಥಾಪಕ ಹಾಗೂ ಸಿಇಒ ಪಾವೆಲ್ ದುರೊವ್ ತೀವ್ರವಾಗಿ ಟೀಕಿಸಿದ್ದಾರೆ. "ಕೆಲವು ಬಳಕೆದಾರರು ತಪ್ಪು ಎಸಗಿದ್ದಾರೆ ಎಂಬ ಕಾರಣಕ್ಕೆ ಇಡೀ ದೇಶದಲ್ಲೇ ಆಪ್ ನಿಷೇಧಿಸುವುದು ಸರಿಯಲ್ಲ" ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಅಲ್ಲದೆ, ಈ ನಿಷೇಧದ ಹಿಂದೆ ವ್ಯಾಪಾರ ಹಿತಾಸಕ್ತಿಗಳ ಕೈವಾಡವಿದ್ದು, ಪ್ರತಿಸ್ಪರ್ಧಿ ಸಂಸ್ಥೆಗಳು ಸರ್ಕಾರದ ಮೇಲೆ ಒತ್ತಡ ಹೇರಿವೆ ಎಂದು ಅವರು ಗಂಭೀರ ಆರೋಪ ಮಾಡಿದ್ದಾರೆ. ಆದರೆ ಈ ಆರೋಪಗಳನ್ನು ಸಂಬಂಧಪಟ್ಟ ಸಂಸ್ಥೆಗಳು ಸ್ಪಷ್ಟವಾಗಿ ನಿರಾಕರಿಸಿವೆ.

ಸದ್ಯಕ್ಕೆ ಹಳೆಯ ಬಳಕೆದಾರರಿಗೆ ಭಾರತದಲ್ಲಿ ಟೆಲಿಗ್ರಾಮ್‌ನ ಸಂಪೂರ್ಣ ಭವಿಷ್ಯ ಮತ್ತು ಮುಕ್ತ ಲಭ್ಯತೆಯು ಇನ್ನೂ ಗೊಂದಲದಲ್ಲೇ ಉಳಿದಿದೆ.

# 7.51 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು

**ಕಲಬುರಗಿ,ಜೂ.23**–ಮನೆ ಬೀಗ ಮುರಿದು 7, 51, 400 ರೂ.ಮೌಲ್ಯದ ನಗನಾಣ್ಯ ಕಳವು ಮಾಡಿರುವ ಘಟನೆ ಚೌಕ್ ಪೊಲೀಸ್ ಠಾಣೆ ವ್ಯಾಪ್ತಿಯ ಸಿದ್ಧರಾಮೇಶ್ವರ ಕಾಲೋನಿಯಲ್ಲಿ ನಡೆದಿದೆ.

ಪ್ರೌಢಶಾಲಾ ಶಿಕ್ಷಕರಾದ ಸಿದ್ಧಾರೂಢ ಬೆಳಮಗಿ ಎಂಬುವವರ ಮನೆ ಬೀಗ ಮುರಿದು ಕಳ್ಳರು ಚಿನ್ನ, ಬೆಳ್ಳಿ ಮತ್ತು ನಗದು ದೋಚಿಕೊಂಡು ಹೋಗಿದ್ದಾರೆ.




ಮಗಳ ಮದುವೆ ಕಾರ್ಯಕ್ರಮ ಇದ್ದ ಪ್ರಯುಕ್ತ ಮನೆಗೆ ಬೀಗ ಹಾಕಿಕೊಂಡು ಕಲ್ಯಾಣ ಮಂಟಪಕ್ಕೆ ಹೋಗಿದ್ದು, ಈ ವೇಳೆ ಕಳ್ಳರು ಮನೆ ಬೀಗ ಮುರಿದು ಚಿನ್ನ, ಬೆಳ್ಳಿ ಮತ್ತು ನಗದು ಹಣ ಕಳವು ಮಾಡಿದ್ದಾರೆ ಎಂದು ತಿಳಿದುಬಂದಿದೆ.

ಚೌಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

ಧೈರ್ಯದ ದಾರಿ

ಬುಧವಾರ: 24-06-2026

# ಮಠದ ಸದ್ವಿಕಾಸಕ್ಕೆ ಭಕ್ತರೇ ಬುನಾದಿ :ಹಾರಕೂಡ ಶ್ರೀ



**ಬೀದರ್:** ಹಾರಕೂಡದ ಲಿಂಗೈಕ್ಯ ಚೆನ್ನಬಸವ ಶಿವಯೋಗಿಗಳ ಮಠದ ಪರಂಪರೆ ಹಾಗೂ ನಮ್ಮ ಮೇಲೆ ಲಕ್ಷಾಂತರ ಭಕ್ತರು ಇಟ್ಟಿರುವ ಭಕ್ತಿ ಶ್ರದ್ಧೆಯಿಂದಾಗಿ ಹಾರಕೂಡ ಶ್ರೀಮಠ ಸದ್ವಿಕಾಸ ಹೊಂದಿ ಉತ್ತುಂಗ ಶ್ರೇಣಿಯ ದಾಸೋಹ ಹಾಗೂ ಆಧ್ಯಾತ್ಮಿಕ ತಾಣವಾಗಿ ಕಾಣಲು ಸಾಧ್ಯವಾಗಿದೆ ಎಂದು ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಭಕ್ತರಿಂದ ಆಯೋಜಿಸಿದ ಗುರು ವಂದನೆ ಸಮಾರಂಭದಲ್ಲಿ, ಇಲ್ಲಿಯವರೆಗೆ ಒಂದು ಸಾವಿರ ಒಂದನೇ ತುಲಾಭಾರ ಸೇವೆ ಸ್ವೀಕರಿಸಿದ ಐತಿಹಾಸಿಕ ಅಮೃತಗಳಿಗೆಯಲ್ಲಿ ದಿವ್ಯ ವಾಣಿ ಕರುಣಿಸಿದ ಶ್ರೀಗಳು, ಸಾವಿರ ತುಲಾಭಾರ ಸೇವೆ ಸಮರ್ಪಿಸಿರುವುದು, ಹಾರಕೂಡ ಮಠದ ಭಕ್ತರ ಅಚಲವಾದ ಗುರುಭಕ್ತಿಗೆ ಐತಿಹಾಸಿಕ ನಿದರ್ಶನವೆಂದು ಹೇಳಲು ನಮಗೆ ಖುಷಿ ಎನಿಸುತ್ತಿದೆ.

ತುಲಾಭಾರ ಸೇವೆಯಿಂದ ಅರ್ಪಿಸಿದ ದೇಣಿಗೆಯ ಹಣವನ್ನು ಬಡ, ದೀನ ದಲಿತ ಮಕ್ಕಳ ಶಿಕ್ಷಣಕ್ಕಾಗಿ ಬಳಸಲ್ಪಡುತ್ತದೆ ಎಂದು ಹೇಳಿದ ಶ್ರೀಗಳು ತುಲಾಭಾರ ಸೇವೆ ನೆರವೇರಿಸಿದ ಹಾಗೂ ಸರ್ವಭಕ್ತರ ಬಾಳು ಶುಭ ಹಾಗೂ ಶ್ರೇಯಸ್ಸಿನಿಂದ ಕೂಡಿರಲಿ ಎಂದು ಹಾರೈಸಿದರು.

ಸಿದ್ರಾಮಪ್ಪ ದೇಗಾಂವ, ಮಲ್ಲಿನಾಥ ಹಿರೇಮಠ ಹಾರಕೂಡ, ಆನಂದರಾವ ಝುಳಕೆ, ಸೂರ್ಯಕಾಂತ ಬಿರಾದಾರ, ಮಂಜುನಾಥ ದೇಗಾಂವ, ವಿರಣ್ಣ ಭಿಮಳ್ಳಿ ಕಲಬುರಗಿ, ರಾಕೇಶ ಮಿಣಜಗಿ ರುಕ್ಮಾಪುರ ಸುರಪುರ, ಮಾಣಿಕಪ್ಪಾ ಶಾಂತಪ್ಪ ಮೆಂತೆ ಕಲಬುರಗಿ ಭಾಗವಹಿಸಿದ್ದರು. ಎಸ್.ಎಮ್.ಭಕ್ತ ಕುಂಬಾರ ಸ್ವಾಗತಿಸಿ, ನಿರೂಪಣೆ ಮಾಡಿದರು. ಕಾರ್ತಿಕ ಸ್ವಾಮಿ ಯಲದುಗುಂಡಿ, ಶರಣಪ್ಪ ಜಮಾದಾರ ಪ್ರಾರ್ಥನೆ ಗೀತೆ ಹಾಡಿದರು.

# ಕ.ಕ ಭಾಗದಿಂದ ಓಲಂಪಿಕ್ಸ್‌ನಲ್ಲಿ ಸಾಧನೆ ಮಾಡುವಂತಾಗಲಿ

**ಕಲಬುರಗಿ: ಜೂ.23:**ವಿಶ್ವ ಮಟ್ಟದಲ್ಲಿ ಪ್ರಸಿದ್ಧಿ ಪಡೆದಿರುವ ಓಲಂಪಿಕ್ಸ್‌ನಲ್ಲಿ ವಿವಿಧ ರೀತಿಯ ಕ್ರೀಡೆಗಳು ಏರ್ಪಡಿಸಲಾಗುತ್ತದೆ. ವಿದ್ಯಾರ್ಥಿ ದೆಸೆಯಿಂದಲೇ ನಮ್ಮ ಕಕ ಭಾಗದ ಕ್ರೀಡಾಪಟುಗಳನ್ನು ಗುರ್ತಿಸಿ, ಅವರಲ್ಲಿ ಆಸಕ್ತಿ ಮೂಡಿಸಿ, ಓಲಂಪಿಕ್ಸ್ ಕ್ರೀಡೆಯ ಬಗ್ಗೆ ಸೂಕ್ತ ಮಾರ್ಗದರ್ಶನ, ತರಬೇತಿಯನ್ನು ನೀಡಿ, ಅದರಲ್ಲಿ ಭಾಗವಹಿಸಿ, ಸಾಧನೆ ಮಾಡುವಂತಾಗಲಿ ಎಂದು ಜಗನ ಬಾಲಕಿಯರ ಸರ್ಕಾರಿ ಪ್ರೌಢಶಾಲೆಯ ದೈಹಿಕ ಶಿಕ್ಷಣ ಶಿಕ್ಷಕ ಗುರುಲಿಂಗಯ್ಯ ಮಠ ಆಶಯ ವ್ಯಕ್ತಪಡಿಸಿದರು.

ನಗರದ ನ್ಯೂ ರಾಘವೇಂದ್ರ ಕಾಲನಿಯಲ್ಲಿನ 'ಮುತ್ತಾ ಟ್ಯುಟೋರಿಯಲ್ಸ್'ನಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಭಾನುವಾರ ಜರುಗಿದ 'ಅಂತಾರಾಷ್ಟ್ರೀಯ ಓಲಂಪಿಕ್ಸ್ ದಿನಾಚರಣೆ'ಯನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಉಪನ್ಯಾಸಕ ಎಚ್.ಬಿ.ಪಾಟೀಲ್ ಮಾತನಾಡಿ, ಕ್ರೀಡೆಯ ಮೌಲ್ಯಗಳನ್ನು ಜಾಗತಿಕ ಮಟ್ಟದಲ್ಲಿ ಸಾರಲು ಈ ದಿನಾಚರಣೆಯನ್ನು ಆಚರಿಸಲಾಗುತ್ತದೆ. ಕ್ರೀಡೆಯಲ್ಲಿ ದೊಡ್ಡದು-ಸಣ್ಣದು ಎಂಬುದಿಲ್ಲ. ಯಾವುದೇ ಕ್ರೀಡೆಯಲ್ಲಿ ಸಾಧನೆ ಮಾಡಬೇಕಾದರೆ, ಅದರ ನೀತಿ-ನಿಯಮಗಳ ಬಗ್ಗೆ ಸರಿಯಾಗಿ ಅರ್ಥಮಾಡಿಕೊಂಡು, ಪೂರ್ವಸಿದ್ಧತೆಯೊಂದಿಗೆ ತೊಡಗಬೇಕು. ದೊರೆತ ಅವಕಾಶಗಳನ್ನು ಸದ್ಬಳಕೆ ಮಾಡಿಕೊಂಡು ಸಾಧನೆಯನ್ನು ಮಾಡುವ ಮೂಲಕ ನಮ್ಮ ಭಾಗದ ಕೀರ್ತಿಯನ್ನು ತರಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ರಾಜ್ಯ ಮಟ್ಟದ ಷಟಲ್ ಬ್ಯಾಟ್ಮಿಂಟನ್ ಸಾಧಕ ಕ್ರೀಡಾಪಟು



ರೇಣುಕಾಚಾರ್ಯ ಜಿ.ಮಠ, ಸಂಸ್ಥೆಯ ಮುಖ್ಯಸ್ಥ ಶಿವಕುಮಾರ ಮುತ್ತಾ, ಶಿಕ್ಷಕರಾದ ಆದರ್ಶ ವಡ್ಡನಕೇರಿ, ವಿಶ್ವನಾಥ ನಂದರ್ಗಿ, ಗೌರಿ ಹಿರೇಮಠ ಹಾಗೂ ವಿದ್ಯಾರ್ಥಿಗಳಿದ್ದರು.

# ಬೀದರ ವಿವಿ ಅತಿಥಿ ಉಪನ್ಯಾಸಕಿ ಡಾ. ಸುನೀತಾ ಮಹೇಶ್ವರಿಗೆ ಕನ್ನಡ ರತ್ನ ಪ್ರಶಸ್ತಿ

**ಬೀದರ, ಜೂ 23:** ಶಿಕ್ಷಣ ಹಾಗೂ ಸಾಹಿತ್ಯ ಕ್ಷೇತ್ರದಲ್ಲಿ ಗಮನಾರ್ಹ ಸಾಧನೆ ಮಾಡಿರುವ ಬೀದರ ವಿಶ್ವವಿದ್ಯಾಲಯದ ಅತಿಥಿ ಉಪನ್ಯಾಸಕಿ ಡಾ. ಸುನೀತಾ ಮಹೇಶ್ವರಿ ಅವರಿಗೆ ಕನ್ನಡ ಸೇನೆ ಕರ್ನಾಟಕ ವತಿಯಿಂದ ಪ್ರತಿಷ್ಠಿತ "ಕನ್ನಡ ರತ್ನ" ರಾಜ್ಯಮಟ್ಟದ ಪ್ರಶಸ್ತಿ ಪ್ರದಾನ ಮಾಡಲಾಯಿತು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಜೂನ್ 19ರಂದು ನಡೆದ ಕನ್ನಡ ಸೇನೆ ಕರ್ನಾಟಕದ 2ನೇ ಗಡಿನಾಡು ಜಾಗೃತ ಸಮಾವೇಶದಲ್ಲಿ ಈ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು. ಕಾರ್ಯಕ್ರಮವು ಕನ್ನಡ ಸೇನೆ ರಾಜ್ಯಾಧ್ಯಕ್ಷ ಕೆ.ಆರ್. ಕುಮಾರ್ (ಬೆಂಗಳೂರು) ಅವರ ಅಧ್ಯಕ್ಷತೆಯಲ್ಲಿ ನಡೆಯಿತು.

ಭಾರತ ಸೇವಾ ಸಮಿತಿಯ ಹವಾಮಲ್ಲಿನಾಥ ಸ್ವಾಮಿ, ಬಾಲಯೋಗಿ ಅಭಿನವ ಶರಣ ಹಾಗೂ ಶಂಕರಾನಂದ ಸ್ವಾಮೀಜಿಗಳ ದಿವ್ಯ ಸಾನ್ನಿಧ್ಯದಲ್ಲಿ ನಡೆದ ಸಮಾವೇಶವನ್ನು ಭಾರತ ಸರ್ಕಾರದ ರಾಜ್ಯ ಅಭಿವೃದ್ಧಿ ಸಮನ್ವಯ ಮತ್ತು ಮೇಲುಸ್ತುವಾರಿ ಸಮಿತಿಯ ಸದಸ್ಯ ಶಿವಯ್ಯ ಸ್ವಾಮಿ ಉದ್ಘಾಟಿಸಿದರು. ಡಾ. ರವಿ ಸ್ವಾಮಿ ಅವರ ಮುಖಂಡತ್ವದಲ್ಲಿ ಆಯೋಜಿಸಲಾದ ಕಾರ್ಯಕ್ರಮದಲ್ಲಿ ವಿಕಲಚೇತನರಾಗಿದ್ದರೂ ಶಿಕ್ಷಣ ಮತ್ತು ಸಾಹಿತ್ಯ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಡಾ. ಸುನೀತಾ ಮಹೇಶ್ವರಿ ಅವರನ್ನು ಸನ್ಮಾನಿಸಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಸರಿಗಮಪ ಸೀಸನ್-21ರ ವಿಜೇತೆ ಕು. ಶಿವಾನಿ



ಸ್ವಾಮಿ, ಕಾಮಿಡಿ ಕಿಲಾಡಿ ಖ್ಯಾತಿಯ ನಯನ ಹಾಗೂ ಹಾಸ್ಯ ಚಲನಚಿತ್ರ ನಟ ಟೆನಶನ್ ಕೃಷ್ಣ ಭಾಗವಹಿಸಿ ಪ್ರೇಕ್ಷಕರನ್ನು ರಂಜಿಸಿದರು. ನಾಡಿನ ಖ್ಯಾತ ಗಾಯಕರು ಕೂಡ ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು.

ಈ ಸಂದರ್ಭದಲ್ಲಿ ಕನ್ನಡ ಸೇನೆ ಜಿಲ್ಲಾಧ್ಯಕ್ಷ ಸುಭಾಷ ಕೆನಾಡೆ, ತಾಲ್ಲೂಕು ಅಧ್ಯಕ್ಷ ರಾಜಶೇಖರ ಮಂಗಲಪೇಟ ಹಾಗೂ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಶ್ರೀಮತಿ ಶಕುಂತಲಾ ಬಿರಾದ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

# ವಿದ್ಯುತ್ ವಿತರಣೆ ಖಾಸಗಿಗೆ ವಿರೋಧಿಸಿ ಮನವಿ



**ಚಿಂಚೋಳಿ:ಜೂ.23:** ಜನಪರ ಸೇವೆಯಾದ ವಿದ್ಯುತ್ ವಿತರಣೆಯನ್ನು ಖಾಸಗಿ ಕಂಪನಿಗಳಿಗೆ ಒಪ್ಪಿಸುವ ಪ್ರಸ್ತಾಪ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಮುಂದಿಟ್ಟಿದ್ದು ಖಂಡಿಸಿ ಪಟ್ಟಣದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ರೈತ ಸೇನೆ ವತಿಯಿಂದ ತಹಸೀಲ್ದಾರ್ ಸುಬ್ಬಣ್ಣ ಜಮಖಂಡಿ ಅವರ ಮೂಲಕ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣಾ ಆಯೋಗದ ಕಾರ್ಯದರ್ಶಿಗಳಿಗೆ ಮನವಿ ಪತ್ರ ಸಲ್ಲಿಸಿದರು ಮಾಧ್ಯಮದವರ ಜೊತೆಗೆ ಚಿಂಚೋಳಿ ಮತ್ತು ಕಾಳಗಿ ತಾಲೂಕಿನ ರೈತ ಸೇನೆಯ ಅಧ್ಯಕ್ಷರಾದ ವೀರಣ್ಣಗಂಗಾಣಿ, ಮಾತನಾಡಿ ಟಾಟ ಪವರ್ ಕಂಪನಿ ಲಿಮಿಟೆಡ್ ಎಂಬ ಖಾಸಗಿ ಸಂಸ್ಥೆಯೊಂದು ಕರ್ನಾಟಕ ಸರ್ಕಾರದ ಸೌಮ್ಯತೆಗೋಳಪಡುವ ಎಲ್ಲಾ ವಿದ್ಯುತ್ ವಿತರಣಾ ಕಂಪನಿಗಳ ಆಯಾ ಪ್ರದೇಶಕ್ಕೆ ಒಳಪಡುವ ಸಮಾನಂತರವಾಗಿ ವಿತರಣಾ ಕಾರ್ಯಕ್ಕೆ ಪರವಾನಿಗೆ ಕೋರಿ ವಿದ್ಯುತ್ ನಿಯಂತ್ರಣ ಆಯೋಗಕ್ಕೆ ಅರ್ಜಿ ಸಲ್ಲಿಸಿ ಆಕ್ಷೇಪಣೆಯನ್ನು ಅಹ್ವಾನಿಸಿರುವುದು ಪ್ರಕಟವಾಗಿರುತ್ತದೆ, ಹಾಗಾಗಿ ಇದನ್ನು ಮಾರವಾಗುವ ಖಾಸಗಿ ಸಂಸ್ಥೆಗೆ ವಿದ್ಯುತ್ ಖಾಸಗಿಕರಣ ಮಾಡಲು ಪರವಾನಿಗೆ ನೀಡಬಾರದು,ರಾಜ್ಯದ ರೈತರ, ಗ್ರಾಹಕರ ಹಿತದೃಷ್ಟಿಯಿಂದ ಖಾಸಗಿ ಕಂಪನಿ ಸಲ್ಲಿಸಿರುವ ಅರ್ಜಿಯನ್ನು ತೀರಸ್ಕಾರ ಮಾಡಬೇಕೆಂದು ವೀರಣ್ಣಗಂಗಾಣಿ, ಒತ್ತಾಯಿಸುತ್ತಿದ್ದೇವೆ ಹೇಳಿದರು ಈ ಸಂದರ್ಭದಲ್ಲಿ ರೇವಣಸಿದ್ದಪ್ಪಾ ಧರಿ, ಸಂತೋಷ ರೆಡ್ಡಿ ಇದ್ದರು

# ರಾಮುನಾಯಕ ತಾಂಡಾ ಬೋಂತಿಯಲ್ಲಿ ಶಾಸಕ ಚವ್ಹಾಣ ಗ್ರಾಮ ವಾಸ್ತವ್ಯಗ್ರಾಮದಲ್ಲಿ ಮೂಲ ಸೌಕರ್ಯಗಳ ಪರಿಶೀಲನೆ

**ಔರಾದ್ :ಜೂ.23:** ಪ್ರಧಾನಿ ನರೇಂದ್ರ ಮೋದಿಯವರು ದೇಶದ ಅತಿ ಹೆಚ್ಚು ಕಾಲ ಸೇವೆ ಸಲ್ಲಿಸಿದ ಚುನಾಯಿತ ಪ್ರಧಾನಿಯಾಗಿ ಹೊಸ ದಾಖಲೆ ನಿರ್ಮಿಸಿರುವ ಹಿನ್ನೆಲೆಯಲ್ಲಿ, ಶಾಸಕ ಪ್ರಭು ಚವ್ಹಾಣ ಅವರು ರಾಮುನಾಯಕ ತಾಂಡಾ ಬೋಂತಿಯಲ್ಲಿ ಶನಿವಾರ ಗ್ರಾಮ ವಾಸ್ತವ್ಯ ನಡೆಸಿದರು.

ಸಂಜೆ ವೇಳೆ ಗ್ರಾಮಕ್ಕೆ ಭೇಟಿ ನೀಡಿದ ಶಾಸಕರು, ಮನೆಯೊಂದರ ಮುಂದೆ ಹೊರಸಿನ ಮೇಲೆ ಕುಳಿತು ಜನರ ಸಮಸ್ಯೆಗಳನ್ನು ಆಲಿಸಿದರು. ಸ್ಥಳೀಯರು ಒಬ್ಬೊಬ್ಬರಾಗಿ ಗ್ರಾಮದ ಸಮಸ್ಯೆಗಳು ಹಾಗೂ ಕೈಗೊಳ್ಳಬೇಕಾದ ಅಭಿವೃದ್ಧಿ ಕಾಮಗಾರಿಗಳ ಕುರಿತು ಶಾಸಕರ ಗಮನಕ್ಕೆ ತಂದರು. ಕುಡಿಯುವ ನೀರಿನ ಪೂರೈಕೆಯಾಗುತ್ತಿದೆಯೇ?, ಶಾಲೆಗೆ ಶಿಕ್ಷಕರು ಸಮಯಕ್ಕೆ ಬರುತ್ತಿದ್ದಾರೆಯೇ?, ಸರಿಯಾಗಿ ಪಾಠ ಮಾಡುತ್ತಿದ್ದಾರೆಯೇ?, ಅಂಗನವಾಡಿ ಕೇಂದ್ರ ಸರಿಯಾಗಿ ನಡೆಯುತ್ತಿದೆಯೇ? ಎಂದು ನಾನಾ ರೀತಿಯ ಪ್ರಶ್ನೆಗಳನ್ನು ಕೇಳುವ ಮೂಲಕ ಗ್ರಾಮದಲ್ಲಿರುವ ಮೂಲ ಸೌಕರ್ಯಗಳ ಬಗ್ಗೆ ಮಾಹಿತಿ ಪಡೆದರು. ಗ್ರಾಮಸ್ಥರ ಸಮಸ್ಯೆಗಳಿಗೆ ಸಂಬಂಧಿಸಿದಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ದೂರವಾಣಿ ಮೂಲಕ ಸಂಪರ್ಕಿಸಿ, ಸಮಸ್ಯೆಗಳ ಪರಿಹಾರಕ್ಕೆ ಅಗತ್ಯ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದರು.

ಸ್ಮಶಾನಭೂಮಿ ಸಮಸ್ಯೆಗೆ ಸಂಬಂಧಿಸಿದಂತೆ ಗ್ರಾಮಸ್ಥರು ಜಮೀನು ನೀಡಲು ಒಪ್ಪಿಗೆ ಸೂಚಿಸಿರುವುದನ್ನು ಉಲ್ಲೇಖಿಸಿದ ಅವರು, ಅಗತ್ಯ ಪ್ರಕ್ರಿಯೆಗಳನ್ನು ತ್ವರಿತವಾಗಿ ಪೂರ್ಣಗೊಳಿಸಿ ಸ್ಮಶಾನಭೂಮಿಗೆ ಭೂಮಿ ಮಂಜೂರು ಮಾಡುವ ಕುರಿತು ಕಂದಾಯ ಇಲಾಖೆಯು ಕ್ರಮ ಕೈಗೊಳ್ಳಬೇಕು ಎಂದು ತಹಸೀಲ್ದಾರರಿಗೆ ಸೂಚಿಸಿದರು. ಈ ವೇಳೆ ತಾಂಡಾವನ್ನು ಕಂದಾಯ ಗ್ರಾಮವನ್ನಾಗಿ ಘೋಷಿಸುವಂತೆ ಸ್ಥಳೀಯರು ಮನವಿ ಸಲ್ಲಿಸಿದರು. ಇದಕ್ಕೆ ಸ್ಪಂದಿಸಿದ ಶಾಸಕ ಪ್ರಭು ಚವ್ಹಾಣ ಅವರು, ಕ್ಷೇತ್ರದ ಹಲವು ತಾಂಡಾಗಳನ್ನು ಕಂದಾಯ ಗ್ರಾಮಗಳನ್ನಾಗಿ ಮಾಡುವ ಕಾರ್ಯ ಈಗಾಗಲೇ ಪ್ರಗತಿಯಲ್ಲಿದ್ದು, ಮುಂದಿನ ದಿನಗಳಲ್ಲಿ ರಾಮುನಾಯಕ ತಾಂಡಾವನ್ನೂ ಕಂದಾಯ ಗ್ರಾಮವನ್ನಾಗಿ ಪರಿವರ್ತಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಈ ವೇಳೆ ಮಾತನಾಡಿದ ಶಾಸಕರು, ಗ್ರಾಮದಲ್ಲಿ ರಸ್ತೆ, ಶಾಲೆ, ಅಂಗನವಾಡಿ, ಕುಡಿಯುವ ನೀರಿನ ಪೂರೈಕೆ ಸೇರಿದಂತೆ ವಿವಿಧ ಮೂಲಸೌಕರ್ಯಗಳನ್ನು ಕಲ್ಪಿಸಲಾಗಿದೆ. ಗ್ರಾಮಸ್ಥರ ಬಹುತೇಕ ಬೇಡಿಕೆಗಳನ್ನು ಈಡೇರಿಸಲಾಗಿದ್ದು, ಸಮುದಾಯ ಭವನದ ಕಾಮಗಾರಿ



ಈಗಾಗಲೇ ಕೈಗೊಳ್ಳಲಾಗಿದೆ. ಬಾಕಿ ಉಳಿದ ಕಾಮಗಾರಿಯನ್ನು ಶೀಘ್ರದಲ್ಲೇ ಪೂರ್ಣಗೊಳಿಸಲಾಗುವುದೆಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾಮಸ್ಥರೊಂದಿಗೆ ಸಂವಾದ ನಡೆಸಿದ ಶಾಸಕರು, ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ದೇಶದಲ್ಲಿ ಮೂಲಸೌಕರ್ಯ ಅಭಿವೃದ್ಧಿ, ಗ್ರಾಮೀಣ ಅಭಿವೃದ್ಧಿ, ಡಿಜಿಟಲ್ ಸೇವೆಗಳ ವಿಸ್ತರಣೆ, ರೈತರ ಕಲ್ಯಾಣ, ಮಹಿಳಾ ಸಬಲೀಕರಣ ಹಾಗೂ ಬಡವರಿಗಾಗಿ ವಿವಿಧ ಜನಪರ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲಾಗಿದೆ ಎಂದು ಹೇಳಿದರು. ಮನೆ, ಶೌಚಾಲಯ, ಕುಡಿಯುವ ನೀರು, ಆರೋಗ್ಯ ಮತ್ತು ಆರ್ಥಿಕ ಸಬಲೀಕರಣಕ್ಕೆ ಸಂಬಂಧಿಸಿದ ಯೋಜನೆಗಳ ಮೂಲಕ ದೇಶದ ಕೋಟ್ಯಂತರ ಜನರಿಗೆ ಅನುಕೂಲವಾಗಿದೆ ಎಂದು ತಿಳಿಸಿದರು. ಅಭಿವೃದ್ಧಿ ಮತ್ತು ಜನಸೇವೆಯನ್ನು ಕೇಂದ್ರ ಬಿಂದುವಾಗಿಟ್ಟುಕೊಂಡು ಭಾರತವು ಜಾಗತಿಕ ಮಟ್ಟದಲ್ಲಿ ಹೊಸ ಗುರುತನ್ನು ಪಡೆದುಕೊಂಡಿದೆ ಎಂದು ಹೇಳಿದರು.

ಈ ವೇಳೆ ತಹಸೀಲ್ದಾರ ಮಹೇಶ ಪಾಟೀಲ, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಕಿರಣ ಪಾಟೀಲ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಮುಖಂಡರು, ಗ್ರಾಮ ಪಂಚಾಯಿತಿ ಪ್ರತಿನಿಧಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು. ನಂತರ ಹಿರಿಯರಾದ ದೇವು ನಾಯಕ ಅವರ ಮನೆಯಲ್ಲಿ ವಾಸ್ತವ್ಯ ಮಾಡಿದರು.

# ನಜರಾಪೂರ ಶಾಲೆಯಲ್ಲಿ ಸಂಭ್ರಮ ಶನಿವಾರ



**ಗುರುಮಠಕಲ್:ಜೂ.23:**ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ನಜರಾಪೂರ ತಿಂಗಳ 3ನೇ ಶನಿವಾರ (ಸಂಬ್ರಮ ಶನಿವಾರ)ದ ಪ್ರಯುಕ್ತ ವಿಕಲಚೇತನರ ವ್ಯಕ್ತಿಗಳೊಂದಿಗೆ ಸಂವಹನ ಕಾರ್ಯಕ್ರಮ ಹಮಿಕೋಳ್ಳಲಾಗಿತ್ತು.ಕಾರ್ಯಕ್ರಮದ ಅಧ್ಯಕ್ಷತೆ ಮುಖ್ಯಗುರುಗಳಾದ ಮಾಣಿಕಪ್ಪ ಹಾಗೂ ಮುಖ್ಯ ಅಥಿತಿಗಳಾಗಿ ಆರ್. ಪಿ. ಡಿ. ಟಾಸ್ಕ್ ಫೋರ್ಸ್ ಗುರುಮಠಕಲ ತಾಲೂಕ ಅಧ್ಯಕ್ಷರಾದ ಸಿದ್ದಣ್ಣಗೌಡ ಮಾಲಿ ಪಾಟೀಲ್ ನಜರಾಪೂರ ಬಾಗವಹಿಸಿದರು. 2016ರ ಕಾಯ್ದೆಯ ಪ್ರಕಾರ ಸಿಗುವ ಸೌಲಭ್ಯಗಳು ಹಾಗೂ ವಿಕಲಚೇತನರ ಸಾಧಕರ ಕುರಿತು ಸವಿಸ್ತಾರವಾಗಿ ಮಾತನಾಡಿದರು. ಸಭೆಯಲ್ಲಿ ಶಿಕ್ಷಕರಾದ ಮೋಗಲಪ್ಪ. ರಾಜೇಶ್ವರಿ .ಯಶೋಧ .ಚನ್ನಪ್ಪ.ಎಸ್. ಡಿ. ಎಂ. ಸಿ ಅಧ್ಯಕ್ಷರಾಧ ನಭಿಸಾಬ ಬೋಯಿನ್. ಹಾಗೂ ಶಾಲಾ ವಿಥ್ಯಾರ್ಥಿಗಳು ಬಾಗವಹಿಸಿದರು. ಸ್ವಾಗತವನ್ನು ಸಹ ಶಿಕ್ಷಕರಾಧ ಬಸಿರಮೀಯಾ ನಡೆಸಿಕೋಟ್ಟರು. ದೇವಪ್ಪ ವಂಧನಾರ್ಪಣೆ ಮಾಡಿ ಸಭೆ ಮುಕ್ತಾಯಗೋಳಿಸಲಾಯಿತ್ತು.

# ಗ್ರಾಮಗಳಲ್ಲಿ ನೀರಿನ ಸಮಸ್ಯೆಯಾದರೆ ಪಿಡಿಒಗಳೆ ಹೊಣೆಗಾರರು: ಸಚಿವ ಡಾ. ಶರಣಪ್ರಕಾಶ್ ಪಾಟೀಲ್

**ಸೇಡಂ,ಜೂ,23:** ತಾಲೂಕಿನಲ್ಲಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾದರೆ ಅದಕ್ಕೆ ನೇರವಾಗಿ ಆಯಾ ಗ್ರಾಮ ಪಂಚಾಯತಿಯ ಅಭಿವೃದ್ಧಿ ಅಧಿಕಾರಿಗಳೇ ಹೊಣೆಗಾರರಾಗುತ್ತಾರೆ ಎಂದು ಸಚಿವ ಡಾ ಶರಣಪ್ರಕಾಶ್ ಪಾಟೀಲ್ ಅವರು ಎಚ್ಚರಿಕೆ ನೀಡಿದರು. ನಗರದಲ್ಲಿರುವ ತಾಲೂಕು ಪಂಚಾಯತ ಸಭಾಂಗಣದಲ್ಲಿಂದು ಕೆ.ಡಿ.ಪಿ ಸಭೆಯಲ್ಲಿ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣಪ್ರಕಾಶ ಆರ್.ಪಾಟೀಲ್ ಅವರ ಅಧ್ಯಕ್ಷತೆ ವಹಿಸಿ ತಾಲೂಕ ಮಟ್ಟದ ಅಧಿಕಾರಿಗಳ ಜೊತೆಗೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು ನೀರಿನ ಸಮಸ್ಯೆ ನಿರ್ವಹಣೆಯಲ್ಲಿ ಬೇಜವಾಬ್ದಾರಿತನ ತೋರುತ್ತಿರುವ ಹಂದರಕಿ ಗ್ರಾಪಂ ಪಿಡಿಒ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ಎಚ್ಚರಿಸಿದ್ದಾರೆ.ಈ ವೇಳೆಯಲ್ಲಿ ಸಹಾಯಕ ಆಯುಕ್ತರಾದ ಪ್ರಭುರೆಡ್ಡಿ, ತಹಸೀಲ್ದಾರ್ ಶ್ರೀಯಾಂಕ ಧನಶ್ರೀ ತಾಪಂ ಕಾರ್ಯನಿರ್ವಾಹಕ ಅಧಿಕಾರಿಗಳಾದ ಎಂಡಿ. ಸೈಯದ್ ಪಟೇಲ್, ಜಂಟಿ ನಿರ್ದೇಶಕರು ತೋಟಗಾರಿಕೆ



ಹಾಗೂ ಸೇಡಂ ತಾಲೂಕ ಪಂಚಾಯತ್ ಆಡಳಿತಾಧಿಕಾರಿಗಳಾದ ಸಂತೋಷ್ ನಾಮ್ದಾರ್ ಇದ್ದರು

# ಖರ್ಗೆ ವಿರುದ್ಧ ಹೇಳಿಕೆ ನೀಡಿದರೆ ಉಗ್ರ ಪ್ರತಿಭಟನೆ : ರಾಜು ಆಲಗೂರ ಎಚ್ಚರಿಕೆ



**ವಿಜಯಪುರ, ಜೂ. 23:** ಆರ್‌ಎಸ್‌ಎಸ್ ಕುರಿತು ರಾಜ್ಯದ ಗೃಹ ಸಚಿವ ಪ್ರಿಯಾಂಕಾ ಖರ್ಗೆ ಅವರು ನೀಡಿರುವ ಹೇಳಿಕೆಗೆ ಬೆಂಬಲ ವ್ಯಕ್ತಪಡಿಸಿರುವ ಮಾಜಿ ಶಾಸಕ ರಾಜು ಆಲಗೂರ ಅವರು, ಈ ವಿಚಾರದಲ್ಲಿ ಮಾಜಿ ಸಂಸದ ರಮೇಶ ಜಿಗಜಿಣಗಿ ನೀಡಿರುವ ಪ್ರತಿಕ್ರಿಯೆಯನ್ನು ತೀವ್ರವಾಗಿ ಖಂಡಿಸಿದ್ದಾರೆ.
ಪತ್ರಿಕಾ ಪ್ರಕಟಣೆ ಮೂಲಕ ಪ್ರತಿಕ್ರಿಯಿಸಿರುವ ಅವರು, ರಾಜ್ಯದ ನೂತನ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ದೇಶದಲ್ಲಿರುವ ಎಲ್ಲ ಸಂಘ-ಸಂಸ್ಥೆಗಳು ನೋಂದಣಿ ಮಾಡಿಕೊಂಡಿರುವಾಗ ಆರ್‌ಎಸ್‌ಎಸ್ ಏಕೆ ನೋಂದಣಿ ಮಾಡಿಕೊಳ್ಳಬಾರದು ಎಂದು ಪ್ರಶ್ನೆ ಎತ್ತಿರುವುದು ಸಂವಿಧಾನಬದ್ಧ ಹಕ್ಕಾಗಿದೆ ಎಂದು ಹೇಳಿದ್ದಾರೆ.
ಈ ಹೇಳಿಕೆಗೆ ಪ್ರತಿಯಾಗಿ ಮಾಜಿ ಸಂಸದ ರಮೇಶ ಜಿಗಜಿಣಗಿ ಅವರು ಪ್ರಿಯಾಂಕ ಖರ್ಗೆ ಅವರ ಬಗ್ಗೆ ಅವಹೇಳನಕಾರಿ ಪದಗಳನ್ನು ಬಳಸಿ, ದಲಿತರು ಆರ್‌ಎಸ್‌ಎಸ್ ವಿರುದ್ಧ ಮಾತನಾಡಬಾರದು ಎಂದು ಹೇಳಿರುವುದು ಖಂಡನೀಯ ಎಂದು ಆಲಗೂರ ಆರೋಪಿಸಿದ್ದಾರೆ.
ಆರ್‌ಎಸ್‌ಎಸ್ ಅನ್ನು ದಲಿತರು ಪ್ರಶ್ನಿಸಿದರೆ ಸರ್ವನಾಶವಾಗುತ್ತದೆ ಎಂದಾದರೆ, ಅದು ಭಯೋತ್ಪಾದಕ ಸಂಘಟನೆಯೇ?" ಎಂದು ಪ್ರಶ್ನಿಸಿರುವ ಅವರು, ದೇಶದ ಪ್ರತಿಯೊಬ್ಬ ನಾಗರಿಕನಿಗೂ ಸಂವಿಧಾನದ ಅಡಿಯಲ್ಲಿ ಯಾವುದೇ ಸಂಘಟನೆ ಅಥವಾ ವಿಷಯವನ್ನು ಪ್ರಶ್ನಿಸುವ ಹಕ್ಕಿದೆ ಎಂಬುದನ್ನು ಜಿಗಜಿಣಗಿ ಅವರು ಮರೆತಂತಿದೆ ಎಂದು ಟೀಕಿಸಿದ್ದಾರೆ.
ದಲಿತರ ಪ್ರತಿನಿಧಿಯಾಗಿರುವ ರಮೇಶ ಜಿಗಜಿಣಗಿ ಅವರು ಲೋಕಸಭೆಯಲ್ಲಿ ಅಥವಾ ಸಾರ್ವಜನಿಕವಾಗಿ ದಲಿತರ ಸಮಸ್ಯೆಗಳ ಬಗ್ಗೆ ಎಷ್ಟು ಬಾರಿ ಧ್ವನಿ ಎತ್ತಿದ್ದಾರೆ ಎಂಬುದನ್ನು ಸ್ಪಷ್ಟಪಡಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.
ಮುಂದಿನ ದಿನಗಳಲ್ಲಿ ಪ್ರಿಯಾಂಕ ಖರ್ಗೆ ಅಥವಾ ಆರ್‌ಎಸ್‌ಎಸ್ ಕುರಿತು ಪ್ರಶ್ನಿಸುವವರ ವಿರುದ್ಧ ಹಗುರವಾಗಿ ಮಾತನಾಡಿದರೆ ಉಗ್ರ ಪ್ರತಿಭಟನೆ ಎದುರಿಸಬೇಕಾಗುತ್ತದೆ ಎಂದು ಮಾಜಿ ಶಾಸಕ ಹಾಗೂ ಜಿಲ್ಲಾ ಕಾಂಗ್ರೆಸ್ ಮಾಜಿ ಅಧ್ಯಕ್ಷ ರಾಜು ಆಲಗೂರ ಎಚ್ಚರಿಕೆ ನೀಡಿದ್ದಾರೆ.

# ವಿದ್ಯುತ್ ವಿತರಣಾ ಪರವಾನಿಗೆ ಖಾಸಗಿ ಕಂಪನಿಗೆ ನೀಡಬೇಡಿ




**ಯಾದಗಿರಿ,ಜೂ.23**-ಅಖಿಲ ಭಾರತ ರೈತ ಕೃಷಿ ಕಾರ್ಮಿಕರ ಸಂಘಟನೆ (ಎಐಕೆಕೆಎಂಎಸ್) ಯಾದಗಿರಿ ಜಿಲ್ಲಾ ಸಮಿತಿಯ ವತಿಯಿಂದ ಕರ್ನಾಟಕ ರಾಜ್ಯ ಸರ್ಕಾರವು ವಿದ್ಯುತ್ ವಿತರಣಾ ಪರವಾನಗಿಯನ್ನು ಟಾಟಾ ಕಂಪನಿಗೆ ನೀಡುತ್ತಿರುವುದನ್ನು ವಿರೋಧಿಸಿ ಸಾವಿರಾರು ಸಂಖ್ಯೆಯಲ್ಲಿ ಸಹಿಗಳನ್ನು ಸಂಗ್ರಹಿಸಿ ಜೆಸ್ಕಾಂ ನ ಮುಖ್ಯ ಕಾರ್ಯನಿರ್ವಾಹಕ ಅಭಿಯಂತರರಾದ ರಾಘವೇಂದ್ರ ರವರಿಗೆ ನೀಡಲಾಯಿತು.
ಕರ್ನಾಟಕದಲ್ಲಿ 19 ಜಿಲ್ಲೆಗಳ ವಿದ್ಯುತ್ ವಿತರಣಾ ಪರವಾನಗಿ ಕೋರಿ ಅರ್ಜಿ ಸಲ್ಲಿಸಿದ ವಿದ್ಯುತ್ ಪೂರೈಕೆಯನ್ನು ಖಾಸಗಿಯವರಾದ ಟಾಟಾ ಕಂಪನಿಗೆ ಕೊಡುವುದರಿಂದ ಕಡು ಬಡವರಿಗೆ ಸಿಗುವ ಕುಟಿರ ಜ್ಯೋತಿ ಭಾಗ್ಯ, ಜ್ಯೋತಿ ಗಂಗಾ ಕಲ್ಯಾಣ, ರೈತರ ಪಂಪ್ಸೆಟ್ಗಳಿಗೆ 10 ಹೆಚ್‌ಪಿ ವರೆಗೆ ಉಚಿತವಾಗಿ ಸಿಗುವ ವಿದ್ಯುತ್ ಸೌಲಭ್ಯವನ್ನು ನಿಲ್ಲಿಸಲಾಗುತ್ತದೆ. ಈ ರೈತ ವಿರೋಧಿ ನಡೆಯನ್ನು ವಿರೋಧಿಸಿ ಈಗಾಗಲೇ ಇಡೀ ರಾಜ್ಯದಾದ್ಯಂತ ಜನ ಚಳುವಳಿ ನಡೆಯುತ್ತಿದ್ದು, ಈ ಹೋರಾಟದ ಮುಂದುವರಿಕೆಯ ಭಾಗವಾಗಿ ಈ ನಡೆಯನ್ನು ಕೂಡಲೇ ಕೈ ಬಿಡಬೇಕೆಂದು ಆಗ್ರಹಿಸಿ ಜಿಲ್ಲೆಯಾದ್ಯಂತ ಸಂಗ್ರಹಿಸಲಾದ ಸಾವಿರಾರು ಸಹಿಗಳನ್ನು ಸೋಮವಾರ ನೀಡಲಾಯಿತು.
ಈ ಸಂದರ್ಭದಲ್ಲಿ ಅಖಿಲ ಭಾರತ ರೈತ ಕೃಷಿ ಕಾರ್ಮಿಕ ಸಂಘಟನೆಯ ಯಾದಗಿರಿ ಜಿಲ್ಲಾ ಅಧ್ಯಕ್ಷರಾದ ಶರಣಗೌಡ ಗೂಗಲ್ ಉಪಾಧ್ಯಕ್ಷರಾದ ಜಮಾಲ್ ಸಾಬ್ ಹೆಡಗಿಮದ್ರಾ, ಸಂಘಟನೆಯ ಪದಾಧಿಕಾರಿಗಳಾದ ಸಿದ್ದಪ್ಪ ಬಡಿಗೇರ್, ಸುಭಾಷ್ ಚಂದ್ರ ಬಾವನೋರ್, ರಾಜು ಇಮ್ಲಾಪುರ್, ಚಂದ್ರರೆಡ್ಡಿ ಪೂಜಾರಿ, ಂಖಆಖಔ ನ ಶಿಲ್ಪಾ ಬಿ ಕೆ ಹಾಗೂ ನೂರಾರು ಜೆಸ್ಕಾಂ ನೌಕರರು ಉಪಸ್ಥಿತರಿದ್ದರು.

# ಸಿದ್ಧರಾಮೇಶ್ವರ ವೈದ್ಯಕೀಯ ಕಾಲೇಜು: ಯೋಗ ದಿನಾಚರಣೆ



**ಬೀದರ್:** ಇಲ್ಲಿಯ ನೌಬಾದ್‌ನ ಶ್ರೀ ಸಿದ್ಧರಾಮೇಶ್ವರ ಆಯುರ್ವೇದಿಕ್ ವೈದ್ಯಕೀಯ ಕಾಲೇಜಿನಲ್ಲಿ ಭಾನುವಾರ ಅಂತರರಾಷ್ಟ್ರೀಯ ಯೋಗ ದಿನ ಆಚರಿಸಲಾಯಿತು.
ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಸಾಮೂಹಿಕ ಯೋಗಾಭ್ಯಾಸ ಮಾಡಿದರು.
ಕಾಲೇಜು ಪ್ರಾಚಾರ್ಯ ಡಾ. ರೂಪೇಶ ಎಕಲಾರಕರ್, ಸಿದ್ಧಲಿಂಗೇಶ್ವರ ಫಾರ್ಮಸಿ ಕಾಲೇಜು ಪ್ರಾಚಾರ್ಯ ರಾಜಕುಮಾರ ಬಿರಾದಾರ, ಕಾಲೇಜಿನ ಬೋಧಕ, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಶರಣೆ ಜಯದೇವಿತಾಯಿ ಲಿಗಾಡೆಯವರ ಕೊಡುಗೆ ಅಪಾರ



**ಕಲಬುರಗಿ :ಜೂ.23:** ಶರಣೆ ಜಯದೇವಿ ತಾಯಿ ಲಿಗಾಡೆಯವರು ಕನ್ನಡ ಹಾಗೂ ಮರಾಠಿ ಭಾಷೆಯ ಸಾಹಿತಿಗಳು, ಆಧ್ಯಾತ್ಮ ಚಿಂತನಕಾರರು. ಕುಟುಂಬ ವತ್ಸಲೆ, ಸಾಹಿತ್ಯ ಸಾಧಕಿ, ಸಮಾಜ ಸೇವಕಿ, ಶರಣ ಸಾಹಿತ್ಯದ ಪ್ರಸಾರಕಿ, ಜಾತೀಯತೆ, ಅಸ್ಪೃಶ್ಯತೆ ನಿರ್ಮೂಲನೆ ಮತ್ತು ಸ್ತ್ರೀ ಸಮಾನತೆಗಾಗಿ ಶ್ರಮಿಸಿದವರು. ಕನ್ನಡ ನುಡಿಗೆ, ಕನ್ನಡ ನಾಡಿಗೆ ತನ್ನನ್ನು ಅರ್ಪಿಸಿಕೊಂಡು ಅಜರಾಮರ ಕೀರ್ತಿಪಾತ್ರರಾದ ಲಿಗಾಡೆಯವರ ಕೊಡುಗೆ ಅಪಾರವಾಗಿದೆ ಎಂದು ಉಪನ್ಯಾಸಕ, ಶರಣ ಚಿಂತಕ ಎಚ್.ಬಿ.ಪಾಟೀಲ ಹೇಳಿದರು. ನಗರದ ಆಳಂದ ರಸ್ತೆಯ ಸಂತೋಷ ಕಾಲನಿ ಕ್ರಾಸ್ ಸಮೀಪದ 'ರಿಪಬ್ಲಿಕ್ ಸ್ಪೋಕನ್ ಇಂಗ್ಲೀಷ್ ಅಕಾಡೆಮಿ'ಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗಿದ "ಶರಣೆ ಜಯದೇವಿ ತಾಯಿ ಲಿಗಾಡೆಯವರ 114ನೇ ಜಯಂತಿ" ಯ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು. ಲಿಗಾಡೆಯವರ ಜೀವನ ದರ್ಶನವೆಂದರೆ ಅದೊಂದು ಯಶೋಗಾಥೆ. ಹೆಣ್ಣುಮಕ್ಕಳ ಕುರಿತಾದ ಕಾಳಜಿ ಅವರಿಗೆ ಸಹಜವಾಗಿ ರಕ್ತಗತವಾಗಿತ್ತು. ಕನ್ನಡ ನಾಡು-ನುಡಿಯ ಬಗ್ಗೆ ಅಪ್ರತಿಮ ಕಾಳಜಿಯಿತ್ತು. ಸೊಲ್ಲಾಪುರದಲ್ಲಿ ಒಮ್ಮೆ ಕಾಲರಾ ದಾಳಿ ಮಾಡಿದಾಗ ಜಯದೇವಿ ತಾಯಿಯವರು ಅಲ್ಲಲ್ಲಿ ನಾಗರಿಕರ ಸಭೆ ಕರೆದು ಭಾಷಣಗಳ ಮೂಲಕ ಜನರಲ್ಲಿ ಧೈರ್ಯತುಂಬಿ ಅಗತ್ಯಸೇವೆಯನ್ನು ಒದಗಿಸಿದರು. ಗಾಂಧೀಜಿಯವರ ತತ್ವಗಳಿಗೆ ಮಾರುಹೋಗಿ ನೂಲುವ, ಸ್ವದೇಶಿ ಬಟ್ಟೆಯನ್ನು ತೊಡುವ ವ್ರತತೊಟ್ಟು ಜ್ಞಾನಮಂದಿರದಲ್ಲೂ ಅದನ್ನು ಕಾರ್ಯರೂಪಕ್ಕೆ ತಂದರು. ಹಿಂದೂ ಮುಸಲ್ಮಾನ ಬಂಧುಗಳನ್ನೆಲ್ಲಾ ಒಂದೇ ರೀತಿಯಲ್ಲಿ ಕಾಣುತ್ತಿದ್ದ ಹೃದಯವಂತಿಗೆ ಮೆರೆದರು ಎಂದರು. ರಜಾಕಾರರ ದೌರ್ಜನ್ಯದ ದಿನಗಳಲ್ಲಿ ನಿರಾಶ್ರಿತರಿಗಾಗಿ ಅವರು ತಮ್ಮ ನಲವತ್ತು ಎಕರೆಯ ಹೊಲದಲ್ಲಿ ಶಿಬಿರಗಳನ್ನು ಹಾಕಿಕೊಟ್ಟರು. ಮಕ್ಕಳ ವಿದ್ಯಾಭ್ಯಾಸಕ್ಕೆಂದು ಶಾಲೆ ಪ್ರಾರಂಭಿಸಿದರು. ಡಾ. ಮೋದಿಯವರನ್ನು ಕರೆಸಿ ಸಾಮೂಹಿಕ ಶಸ್ತ್ರಕ್ರಿಯೆಗಳ ಸಂದರ್ಭದಲ್ಲಿ ರೋಗಿಗಳ ಮತ್ತು ಅವರ ಸಹಾಯಕರಿಗಾಗಿ ಸಕಲ ವಸತಿ ವ್ಯವಸ್ಥೆಗಳನ್ನೂ ತಾವೇ ಮಾಡಿದರು. ಸಹಕಾರ ಆಂದೋಲನದಲ್ಲಿ ಸಕ್ರಿಯವಾಗಿ ಭಾಗವಹಿಸಿದ್ದರು ಎಂದು ನುಡಿದರು. ಲಿಗಾಡೆಯವರು ಜಯಗೀತೆ, ತಾಯಿಯ ಪದಗಳು, ಶ್ರೀ ಸಿದ್ಧರಾಮ ಪುರಾಣ, ತಾರಕ ತಂಬೂರಿ, ಬಂದೇವು ಕಲ್ಯಾಣಕೆ, ಸಾವಿರದ ಪದಗಳು, ಅರುವಿನಾಗರದಲ್ಲಿ,ಸಿದ್ಧವಾಣಿ, ಬಸವದರ್ಶನ, ಸಮೃದ್ಧ ಕರ್ನಾಟಕಾಂಬೆ ರೂಪರೇಷೆ,
ಮಹಾಯೋಗಿನಿ, ಸಿದ್ಧರಾಮರ ತ್ರಿವಧಿ, ಬಸವವಚನಾಮೃತ,ಶೂನ್ಯ ಸಂಪಾದನೆ ಕೃತಿಗಳನ್ನು ರಚಿಸಿದ್ದಾರೆ ಎಂದರು. ಕಾರ್ಯಕ್ರಮದಲ್ಲಿ ಶಿವಯೋಗೆಪ್ಪಾ ಎಸ್. ಬಿರಾದಾರ, ದತ್ತು ಹಡಪದ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಹಡಪದ ಸಮಾಜದಿಂದ ಪ್ರತಿಭಾ ಪುರಸ್ಕಾರ; ಎಸ್‌ಎಸ್‌ಎಲ್‌ಸಿ, ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಸನ್ಮಾನ



**ಕಲಬುರಗಿ :ಜೂ.23:** ಜಿಲ್ಲಾ ಹಡಪದ ಸಮಾಜದ ಸಹಯೋಗದಲ್ಲಿ ತಾಲೂಕು ಹಡಪದ ಸಮಾಜದ ನೇತೃತ್ವದಲ್ಲಿ ಅಂ. ಬಸವಪ್ರಿಯ ಅಪ್ಪಣ್ಣ ಮಹಾಸ್ವಾಮಿಗಳ 18ನೇ ಪುಣ್ಯಸ್ಮರಣೆ ಅಂಗವಾಗಿ 2025-26ನೇ ಸಾಲಿನ ಎಸ್‌ಎಸ್‌ಎಲ್‌ಸಿಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಸನ್ಮಾನ ಕಾರ್ಯಕ್ರಮ ಸೋಮವಾರ ಕನ್ನಡ ಸಾಹಿತ್ಯ ಪರಿಷತ್‌ನ ಕನ್ನಡ ಭವನದಲ್ಲಿ ನಡೆಯಿತು.
ಹಡಪದ ಅಪಣ್ಣ ಮಂದಿರದ ಶ್ರೀ ಬಾಲ ಬ್ರಹ್ಮಚಾರಿ ರಾಜಶಿಯೋಗಿಗಳು ದಿವ್ಯ ಸಾನಿಧ್ಯ ವಹಿಸಿದ್ದರು. ಕಾಂಗ್ರೆಸ್ ಮುಖಂಡ ಶರಣು ಎ ಪಾಟೀಲ ಕಾರ್ಯಕ್ರಮ ಉದ್ಘಾಟಿಸಿದರು.

ಗುಲಬರ್ಗಾ ವಿಶ್ವವಿದ್ಯಾಲಯದ ಕುಲಸಚಿವ ಡಾ. ರಮೇಶ್ ಲಂಡನಕರ್, ಹಡಪದ ಅಪಣ್ಣ ಅಧ್ಯಯನ ಪೀಠದ ನಿರ್ದೇಶಕ ಡಾ. ಸುರೇಶ್ ಜಂಗೆ, ಸರ್ಕಾರಿ ಮಹಿಳಾ ಮಹಾವಿದ್ಯಾಲಯದ ಡಾ. ಪದ್ಮರಾಜ ರಾಸಣಗಿ ಸೇರಿದಂತೆ ಹಲವು ಗಣ್ಯರು ಭಾಗವಹಿಸಿದ್ದರು.
ಜಿಲ್ಲಾ ಹಡಪದ ಸಮಾಜದ ಅಧ್ಯಕ್ಷ ಈರಣ್ಣ ಸಿ. ಹಡಪದ ಸಣ್ಣೂರ ಅಧ್ಯಕ್ಷತೆ ವಹಿಸಿದ್ದರೆ, ತಾಲೂಕು ಅಧ್ಯಕ್ಷ ಚಂದ್ರಶೇಖರ ಹಡಪದ ತೊನಸನಹಳ್ಳಿ ಕಾರ್ಯಕ್ರಮದ ನೇತೃತ್ವ ವಹಿಸಿದರು. ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಅಧ್ಯಕ್ಷ ವಿಜಯಕುಮಾರ ತೇಗಲತಿಪ್ಪಿ, ವಕೀಲ ಪ್ರಕಾಶ ಅವರಾದಕರ್, ಉದ್ಯಮಿ ಸುಭಾಷಚಂದ್ರ ಸೊನ್ನ, ಆದಾಯ ತೆರಿಗೆ ಸಲಹೆಗಾರ ಚನ್ನಬಸಪ್ಪ ಉಡಗಿ, ಬಸವರಾಜ್ ಸೂಗೂರು ಎನ್, ಭಗವಂತ ಹಡಪದ ಹೊನ್ನಕಿರಣಗಿ,ರಮೇಶ ನೀಲೂರ್,ಅಪ್ಪಾರಾವ ಬಟಗೇರಾ,ಮಲ್ಲಿಕಾರ್ಜುನ ಸಾವಳಗಿ,ದತ್ತಾತ್ರೇಯ ಬಾಂದೇಕರ್,ಸಂತೋಷ್ ಬಗ್ದುರ್ಗಿ, ಶಂಕರ್ ಹರವಾಳ, ವಿನೋದ ಅಂಬಲಗಾ, ಕಾರ್ತಿಕ ನಾಟಿಕಾರ, ರಮೇಶ್ ಕವಲಗಾ,ಸಿದ್ದಪ್ಪ ಯಳಸಂಗಿ,ಶೇಖರ್ ಪಟ್ಟಣ, ಮಲ್ಲಿಕಾರ್ಜುನ ಅವರಾದ,ಸಂದೀಪ್ ಮಹಾಗಾ0ವ್, ಶ್ರೀಶೈಲ ಹೊನ್ನ ಕಿರಣಗಿ, ಪ್ರಕಾಶ್ ಪರ್ತಬಾದ್, ದೇವೇಂದ್ರ ಪಟ್ಟಣ, ಹಣಮಂತ ಉದ್ನೂರ್,ತಿಪ್ಪಣ್ಣ ನರಿಬೋಳ, ಮಾಂತೇಶ್ ಹವಳಗಾ,ಸಿದ್ರಾಮ ಯಾಗಾಪುರ,ಶ್ರೀಮಂತ್ ಮಳಗಿ ಅಂಬರೀಶ್ ಉಡಗಿ, ರಮೇಶ್ ಕೊಲ್ಲೂರು,ಶಂಕರ ಆಳಂದ್ ಸೇರಿದಂತೆ ಸಮಾಜದ ಮುಖಂಡರು, ವಿದ್ಯಾರ್ಥಿಗಳು ಹಾಗೂ ಪಾಲಕರು ಉಪಸ್ಥಿತರಿದ್ದರು.
ಈ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

# ಕಾಂಗ್ರೆಸ್‌ನಲ್ಲಿ ಅಹಿಂದ ನಾಯಕರ ಕಡೆಗಣನೆ ಆರೋಪ: ಬೂತ್ ಮಟ್ಟದ ಕಾರ್ಯಕರ್ತರಿಗೆ ಸೂಕ್ತ ಆದ್ಯತೆ ನೀಡಲು ಶರಣಗೌಡ ಬೋಳಾರಿ ಆಗ್ರಹ



**ಯಾದಗಿರಿ:ಜೂ.23:** ಕಾಂಗ್ರೆಸ್ ಪಕ್ಷದಲ್ಲಿ ಅಹಿಂದ (ಅಲ್ಪಸಂಖ್ಯಾತ, ಹಿಂದುಳಿದ ಹಾಗೂ ದಲಿತ) ಸಮುದಾಯದ ನಾಯಕರಿಗೆ ಹಾಗೂ ಗ್ರಾಮೀಣ ಭಾಗದ ಬೂತ್ ಮಟ್ಟದ ನಿಷ್ಠಾವಂತ ಕಾರ್ಯಕರ್ತರಿಗೆ ಸಮರ್ಪಕ ಗೌರವ ಮತ್ತು ಆದ್ಯತೆ ದೊರೆಯುತ್ತಿಲ್ಲ ಎಂಬ ಆರೋಪ ಕೇಳಿಬಂದಿದೆ.

ಈ ಕುರಿತು ಕಾಂಗ್ರೆಸ್ ಮುಖಂಡ ಶರಣಗೌಡ ತೇಕರಾಳ (ಬೋಳಾರಿ) ಅವರು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಪಕ್ಷದ ಸಂಘಟನೆಗಾಗಿ ವರ್ಷಗಳಿಂದ ಶ್ರಮಿಸುತ್ತಿರುವ ಅಹಿಂದ ನಾಯಕರ ಸೇವೆಯನ್ನು ಗುರುತಿಸಿ ಅವರಿಗೆ ಸೂಕ್ತ ಸ್ಥಾನಮಾನ, ಅವಕಾಶ ಹಾಗೂ ಗೌರವ ನೀಡಬೇಕು ಎಂದು ಒತ್ತಾಯಿಸಿದರು.

ಕೆಪಿಸಿಸಿ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಬಿ.ಕೆ. ಹರಿಪ್ರಸಾದ್ ಅವರ ಕಾರ್ಯಕ್ರಮಕ್ಕೆ ಯಾದಗಿರಿ ಜಿಲ್ಲೆಯಿಂದ ಗ್ರಾಮೀಣ ಭಾಗದ ಬೂತ್ ಮಟ್ಟದ ಕಾಂಗ್ರೆಸ್ ಕಾರ್ಯಕರ್ತರನ್ನು ಕಡೆಗಣಿಸಲಾಗಿದೆ. ಕಾರ್ಯಕ್ರಮದ ಕುರಿತು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಿಂದ ಯಾವುದೇ ಮಾಹಿತಿ ಅಥವಾ ಆಹ್ವಾನ ನೀಡಲಾಗಿಲ್ಲ ಎಂದು ಅವರು ಆರೋಪಿಸಿದರು.

ಗ್ರಾಮೀಣ ಪ್ರದೇಶದ ಬೂತ್ ಮಟ್ಟದ ಕಾರ್ಯಕರ್ತರೇ ಕಾಂಗ್ರೆಸ್ ಪಕ್ಷದ ನೈಜ ಶಕ್ತಿಯಾಗಿದ್ದಾರೆ. ಚುನಾವಣೆಯ ಸಂದರ್ಭದಲ್ಲಿ ಹಗಲಿರುಳು ಶ್ರಮಿಸುವ ಕಾರ್ಯಕರ್ತರನ್ನು ನಿರ್ಲಕ್ಷಿಸುವುದು ಸರಿಯಲ್ಲ. ಪಕ್ಷದ ಪ್ರತಿಯೊಂದು ಕಾರ್ಯಕ್ರಮದಲ್ಲೂ ಎಲ್ಲಾ ವರ್ಗದ ಕಾರ್ಯಕರ್ತರಿಗೆ ಸಮಾನ ಅವಕಾಶ ಕಲ್ಪಿಸಬೇಕು ಎಂದು ಶರಣಗೌಡ ಬೋಳಾರಿ ಹೇಳಿದರು. ಮುಂದಿನ ದಿನಗಳಲ್ಲಿ ಜಿಲ್ಲಾ ಕಾಂಗ್ರೆಸ್ ಸಮಿತಿ ಅಹಿಂದ ನಾಯಕರನ್ನು ಹಾಗೂ ಸಾಮಾನ್ಯ ಕಾರ್ಯಕರ್ತರನ್ನು ಕಡೆಗಣಿಸುವ ಧೋರಣೆಯನ್ನು ಕೈಬಿಟ್ಟು, ಎಲ್ಲಾ ಸಮುದಾಯಗಳ ಮುಖಂಡರು ಮತ್ತು ಕಾರ್ಯಕರ್ತರನ್ನು ವಿಶ್ವಾಸಕ್ಕೆ ಪಡೆದು ಪಕ್ಷ ಸಂಘಟನೆಯನ್ನು ಮತ್ತಷ್ಟು ಬಲಪಡಿಸಬೇಕು ಎಂದು ಅವರು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಓಬಿಸಿ ಅಲೆಮಾರಿ ಸಮುದಾಯದ ಅಧ್ಯಕ್ಷ ಭೀಮರಾಯ ಹಳಿಮನಿ, ಶಂಕರ್ ನಾಯಕ್, ಬಸಲಿಂಗಪ್ಪ ನಾಯಕ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಚಂಡರಕಿ ಗ್ರಾಮ ರಸ್ತೆ ಅಭಿವೃದ್ಧಿ ಕಾಮಗಾರಿಯ ಅಡಿಗಲ್ಲು



**ಗುರುಮಠಕಲ್: ಜೂ.23:**2025-26 ನೇ ಸಾಲಿನ ಕೆ. ಕೆ. ಆರ್. ಡಿ.ಬಿ. ಮ್ಯಾಕ್ರೋ ಸಾಮಾನ್ಯ ಯೋಜನೆ ಅಡಿಯಲ್ಲಿ ಗುರುಮಠಕಲ್ ವಿಧಾನಸಭಾ ಕ್ಷೇತ್ರದ ಗುರುಮಠಕಲ್ ಪಟ್ಟಣದ ಶ್ರೀ ಖಾಸಮಠ ಕ್ರಾಸ್ ದಿಂದ ಪುಟಪಾಕ ಮುಖ್ಯ ರಸ್ತೆವರೆಗೆ ಚಂಡರಕಿ ಗ್ರಾಮದ ಮಾರ್ಗವಾಗಿ ರಸ್ತೆ ಅಭಿವೃದ್ಧಿ ಕಾಮಗಾರಿಯ ಅಡಿಗಲ್ಲು ಸಮಾರಂಭವು ಜೂನ್ 22 ರಂದು ಚಂಡರಕಿ ಗ್ರಾಮದಲ್ಲಿ ಜರುಗಿತು. ಈ ವೇಳೆ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆನೀಡಿ ಕಾರ್ಯಕ್ರಮದ ಘನ ಅಧ್ಯಕ್ಷತೆ ವಹಿಸಿ ಮಾತನಾಡಿದ ಶ್ರೀ ಶರಣಗೌಡ ಕಂದಕೂರ ಶಾಸಕರು ಗಡಿ ಭಾಗದ ಜನರಿಗೆ ಉತ್ತಮ ರಸ್ತೆ ಸೌಲಭ್ಯ ಒದಗಿಸಲು 7 ಕೋಟಿ ರೂಪಾಯಿ ವೆಚ್ಚದಲ್ಲಿ ರಸ್ತೆ ನಿರ್ಮಾಣ ಕಾಮಗಾರಿ ಕ?ಗೆತ್ತಿ ಕೊಳ್ಳಲಾಗಿದೆ, ಇಂತಹ ಅಭಿವೃದ್ಧಿ ವಿಷಯದಲ್ಲಿ ಪಕ್ಷಬಿಟ್ಟು ಸ್ಥಳಿಯರು ಸಹಕಾರ ನೀಡುವುದು ಮುಖ್ಯವಾಗಿದೆ ಎಂದರು. ಈವೇಳೆ ಲೋಕೋಪಯೋಗಿ ಇಲಾಖೆ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪರಶುರಾಮ, ತಹಸೀಲ್ದಾರ ಚನ್ನಮಲ್ಲಪ್ಪ ಘಂಟಿ, ತಾಲೂಕು ಪಂಚಾಯತ್ ಅಧಿಕಾರಿ ಅಂಬರೇಶ ಪಾಟೀಲ್, ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಶ್ರೀ ಮತಿ ಗೀತಾ ಪತ್ತಾರ, ಪ್ರಮುಖರಾದ ಈಶ್ವರ್, ಬೀಮರೆಡ್ಡಿ ಇಟ್ಲಾಪೂರ, ಶರಣು ಅವುಂಟಿ, ಪ್ರಕಾಶ ನಿರೇಟಿ, ಬಸಣ್ಣ ದೇವರಹಳ್ಳಿ, ವೀರಯ್ಯಸ್ವಾಮಿ ಚಂಡರಕಿ, ಮಲ್ಲಿಕಾರ್ಜುನ ಅರುಣಿ, ಹಾಗೂ ಚಂಡರಕಿ ಗ್ರಾಮದ ಮತ್ತು ಮಡೆಪಲ್ಲಿ ಗ್ರಾಮದ ಮುಖಂಡರು, ಸಾರ್ವಜನಿಕರು, ಕಾರ್ಯಕರ್ತರು ಅಡಿಗಲ್ಲು ಸಮಾರಂಭ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE